ವಿಜಯಪುರ | ಸಂಪುಟ 02 | ಸಂಚಿಕೆ 196 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com  RNI NO: KARKAN/2023/86203  ಶನಿವಾರ, ಸೆಪ್ಟೆಂಬರ್ 28, 2024



"ಮೂಡಾ ಹಗರಣದ ಚಕ್ರವ್ಯೂಹದಲ್ಲಿ ಸಿಲುಕಿ ಹತಾಶರಾಗಿರುವ ಸಿಎಂ ಸಿದ್ದರಾಮಯ್ಯ ಅವರು ವಿವೇಚನಾ ರಹಿತರಾಗಿ ಏನೇನೋ ಬಡಬಡಿಸುತ್ತಿದ್ದಾರೆ. ಶುದ್ಧ ಹಸ್ತ, ಶ್ರಮಜೀವಿ ಆಗಿರುವ ಪ್ರಧಾನಿ ನರೇಂದ್ರ ಮೋದಿ ಅವರತ್ತ ಬೆರಳು ತೋರುವ ಯಾವುದೇ ನೈತಿಕತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗಿಲ್ಲ."

- ಪ್ರಲ್ಹಾದ ಜೋಶಿ, ಕೇಂದ್ರ ಸಚಿವರು

## ಸಮರ್ಪಕ ನೀರು ಪೂರೈಕೆಗೆ ಆಗ್ರಹಿಸಿ ಜಯಕರ್ನಾಟಕ ಮನವಿ



■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಕುಡಿಯುವ ನೀರಿನ ಅಸಮರ್ಪಕ ಪೂರೈಕೆ ಸೇರಿದಂತೆ ವಿವಿಧ ಸಮಸ್ಯೆಗಳನ್ನು ಪರಿಹರಿಸುವಂತೆ ಆಗ್ರಹಿಸಿ ಜಯ ಕರ್ನಾಟಕ ಸಂಘಟನೆಯ ಪದಾಧಿಕಾರಿಗಳು ಕೆರೂಟಗಿ ಗ್ರಾಮ ಪಂಚಾಯಿತಿ ಸಿಬ್ಬಂದಿ ಕಾಂತು ರಾಠೋಡಗೆ ಮನವಿ ಸಲ್ಲಿಸಿದರು. ತಾಲ್ಲೂಕಿನ ಕೆರೂಟಗಿ ಗ್ರಾಮ ಪಂಚಾಯಿತಿಗೆ ಆಗಮಿಸಿದ ಜಯಕರ್ನಾಟಕ ಸಂಘಟನೆಯ ಪದಾಧಿಕಾರಿಗಳು ತಾಂಡಾದ ನೀರು ಪೂರೈಕೆ ಸೇರಿದಂತೆ ಹಲವು ಸಮಸ್ಯೆಗಳ ಕುರಿತು ಅಸಮಾಧಾನ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಸಂಘಟನೆಯ ಜಿಲ್ಲಾ ವಕ್ತಾರ ಚನ್ನಪ್ಪಗೌಡ ಬಿರಾದಾರ ಮಾತನಾಡಿ, ಗ್ರಾಮದ ತಾಂಡಾದಲ್ಲಿ ನೀರು ಇದ್ದರೂ ವಾಟರ್‌ಮ್ಯಾನ್ ಇಲ್ಲದ ಕಾರಣ ಸಮಯಕ್ಕೆ ಸರಿಯಾಗಿ ನೀರು ಪೂರೈಸುತ್ತಿಲ್ಲ. ಇನ್ನೂ ಗ್ರಾಮ ಪಂಚಾಯಿತಿಯ ಪಿಡಿಓ ಹಾಗೂ ಕಾರ್ಯದರ್ಶಿ ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ ಇದರಿಂದ ತಾಂಡಾದ ಚರಂಡಿಗಳು ಸರಿಪಡಿಸದೇ ಮಲೀನವಾಗಿ ಗಬ್ಬು ನಾರುತ್ತಿವೆ. ಜೊತೆಗೆ ಪ್ರಾಥಮಿಕ ಶಾಲೆಯ ಕಟ್ಟಡ ಕಾಮಗಾರಿಗಳಿಗೆ ಕೇಳುವವರೇ ಇಲ್ಲದೇ ಕಳಪೆಯಾಗಿ ತೋರುತ್ತಿವೆ. ಈ ಬಗ್ಗೆ ದೂರವಾಣಿ ಮೂಲಕ ಅಧ್ಯಕ್ಷರಿಗೆ ಹೇಳಿದರೂ ಸ್ಪಂದನೆಯಿಲ್ಲ. ಸಂಘಟನೆ ಹಾಗೂ ಗ್ರಾಮಸ್ಥರ ಮನವಿಗೆ ಅಧಿಕಾರಿಗಳು ಸರಿಯಾಗಿ ಸ್ಪಂದಿಸದೇ ಇದ್ದಲ್ಲಿ ಪಂಚಾಯಿತಿ ಕಾರ್ಯಾಲಯದ ಮುಂದೆ ಉಗ್ರಹೋರಾಟ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿ, ಮನವಿ ಸಲ್ಲಿಸಿದರು. ಸಂಘಟನೆಯ ರಮೇಶ ರಾಠೋಡ, ಬಸವರಾಜ ಇಂಗಳಗಿ, ಸಂತೋಷ ಅಂಗಡಿ, ಸುಭಾಸ ಚಟ್ಟರಕಿ, ಶಿವಕಾಂತ ರಾಠೋಡ, ಬಾಬು ಚವ್ಹಾಣ, ಅಪ್ಪು ಚಟ್ಟರಕಿ, ನಿಂಗರಾಜ ಚವ್ಹಾಣ, ಬಾಬು ರಾಠೋಡ, ದೇವಸಿಂಗ್ ರಾಠೋಡ, ಮೋಹನ ಚವ್ಹಾಣ, ಮಲ್ಲನಗೌಡ ಬಿರಾದಾರ ಇದ್ದರು.

ಮುಡಾ ಹಗರಣ | ಮೈಸೂರು ಲೋಕಾಯುಕ್ತದಲ್ಲಿ ದಾಖಲು | ಸಿಎಂ ಸಿದ್ದರಾಮಯ್ಯ 01, ಅವರ ಪತ್ನಿ ಪಾರ್ವತಿ 02 ಆರೋಪಿ

# ಸಿಎಂ ಸಿದ್ದರಾಮಯ್ಯ ವಿರುದ್ಧ FIR ದಾಖಲು!



■ ;]ಆ;;;ಝುಂಖೋಂಂಫಉದಯರಶ್ಮಿ ದಿನಪತ್ರಿಕೆ

ಮೈಸೂರು: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಒಗಆಂ) ದ ನಿವೇಶನ ಹಂಚಿಕೆಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಕ್ಕೆ ಸಂಬಂಧಪಟ್ಟಂತೆ ನಿರೀಕ್ಷೆಯಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಶುಕ್ರವಾರ ಎಂ ಆರ್ ದಾಖಲಾಗಿದೆ. ಅವರ ವಿರುದ್ಧ ತನಿಖೆಗೆ ಜನಪ್ರತಿನಿಧಿಗಳ ನ್ಯಾಯಾಲಯ ಮೈಸೂರು ಲೋಕಾಯುಕ್ತಕ್ಕೆ ಆದೇಶ ನೀಡಿದ ಬೆನ್ನಲ್ಲೇ ಸಿದ್ದರಾಮಯ್ಯನವರ ತವರು ಜಿಲ್ಲೆ ಮೈಸೂರು ಲೋಕಾಯುಕ್ತದಲ್ಲಿ ಎಫ್‌ಐಆರ್ ದಾಖಲಾಗಿದೆ. ಜನಪ್ರತಿನಿಧಿಗಳ ವಿಶೇಷ ಕೋರ್ಟ್ ಆದೇಶದಂತೆ ಲೋಕಾಯುಕ್ತ ಎಡಿಜಿಪಿ ಮನೀಶ್ ಖರ್ಬೀಕರ್ ಸೂಚನೆ ಮೇರೆಗೆ ಮೈಸೂರು ಲೋಕಾಯುಕ್ತ ಎಸ್ ಪಿ ಉದೇಶ್ ನೇತೃತ್ವದಲ್ಲಿ ಎಂ ಆರ್ ದಾಖಲಾಗಿದೆ. ಸಿಆರ್‌ಪಿಸಿ ಅಡಿಯಲ್ಲಿ ಎಫ್‌ಐಆರ್ ದಾಖಲಿಸಿ ಎಂದು ಕೋರ್ಟ್ ಆದೇಶ ನೀಡಿತ್ತು. ಹಲವು ಸೆಕ್ಷನ್ ಗಳಡಿಯಲ್ಲಿ ಎಂ ಆರ್ ದಾಖಲಾಗಿದೆ. ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಅವರ ದೂರಿನ ಮೇರೆಗೆ ಸಿಎಂ ಸಿದ್ದರಾಮಯ್ಯ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ನ್ಯಾಯಾಲಯ ಸೂಚಿಸಿತ್ತು. ನ್ಯಾಯಾಲಯ ಸೂಚಿಸಿರುವ ಐಪಿಸಿ ಸೆಕ್ಷನ್ ಭ್ರಷ್ಟಾಚಾರ ತಡೆ ಕಾಯ್ದೆ, ಬೇನಾಮಿ ಆಸ್ತಿ ವಹಿವಾಟು ಕಾಯ್ದೆ, ಭೂ ಕಬಳಿಕೆ ನಿರ್ಬಂಧ ಕಾಯ್ದೆಯಡಿ ಲೋಕಾಯುಕ್ತ ಎಫ್‌ಐಆರ್ ದಾಖಲಿಸಿದೆ.

ಎ1 ಆರೋಪಿ: ಮುಡಾ ನಿವೇಶನ ಹಂಚಿಕೆ ಪ್ರಕರಣದಲ್ಲಿ ಸಿಎಂ ಸಿದ್ದರಾಮಯ್ಯ ೦ 1 ಆರೋಪಿಯಾಗಿದ್ದರೆ, ಅವರ ಪತ್ನಿ ಪಾರ್ವತಿ ೦ 2 ಆರೋಪಿಯಾಗಿದ್ದಾರೆ. ಇನ್ನು ಅವರ ಬಾಮೈದಾ ಮಲ್ಲಿಕಾರ್ಜುನ ೦ 3, ಭೂಮಾಲಿಕ ದೇವರಾಜು ಎ4 ಹಾಗೂ ಎ5 ಇತರರು ಎಂದು ಎಫ್ ಐಆರ್‌ನಲ್ಲಿ ದಾಖಲಿಸಲಾಗಿದೆ.

## ಸಿದ್ದಾಪರಾಧ ಸಾಬೀತಿಗೆ ಇನ್ನೊಂದೇ ಹೆಜ್ಜೆ ಬಾಕಿ :ಎಚ್ಡಿಕೆ

ಬೆಂಗಳೂರು: ಸಿಬಿಐ ರಾಜ್ಯ ಪ್ರವೇಶಕ್ಕೆ ಕರ್ನಾಟಕ ಸರ್ಕಾರದಿಂದ ನಿರ್ಬಂಧ ಮಾಡಿರುವ ವಿಚಾರಕ್ಕೆ ಸರ್ಕಾರದ ನಡೆಗೆ ಕೇಂದ್ರ ಸಚಿವ ಕುಮಾರಸ್ವಾಮಿ ಕಿಡಿಕಾರಿದ್ದಾರೆ. ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಾಕಿ ಸಿಎಂ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಶ್ರೀಮಾನ್ ಸಿದ್ದರಾಮಯ್ಯನವರೇ ನಿಮ್ಮ ಸಿದ್ವಿಲಾಸಕ್ಕೆ ಉಘೇಉಘೇ ಎನ್ನಲೇಬೇಕು. ಅಂದು ಹಗರಣಗಳಿಂದ ಪಾರಾಗಲು ಲೋಕಾಯುಕ್ತಕ್ಕೇ ಸಮಾಧಿ ಕಟ್ಟಿ ಎಸಿಬಿ ರಚನೆ ಮಾಡಿಕೊಂಡಿರಿ. ಇಂದು ಮುಡಾ ಹಗರಣದಿಂದ ಬಚಾವಾಗಲು ನಿಮಗೀಗ ಅದೇ ಲೋಕಾಯುಕ್ತವೇ ಗತಿ. Karma hit back ಎಂದರೇ ಇದೇ ಅಲ್ಲವೇ ಸಿದ್ದರಾಮಯ್ಯನವರೇ? ಎಂದು ಕಿಡಿಕಾರಿದ್ದಾರೆ.

ನಿಮ್ಮ ಗ್ರಹಚಾರಕ್ಕೆ ಎಸಿಬಿಯನ್ನೂ ಹೈಕೋರ್ಟ್ ಬರ್ಖಾಸ್ತು ಮಾಡಿಬಿಟ್ಟಿತು. ಈಗ ಲೋಕಾಯುಕ್ತವನ್ನೇ ಗುರಾಣಿ ಮಾಡಿಕೊಂಡು ಸಿಬಿಐ ರಾಜ್ಯ ಪ್ರವೇಶಕ್ಕೆ ಸಂಪುಟದಿಂದ ಬಾಗಿಲು ಬಂದ್ ಮಾಡಿಸಿದ್ದೀರಿ. ಅಲ್ಲಿಗೆ ಆರೋಪಿ ಅಪರಾಧಿಯಾದ ಎಂದೇ ಲೆಕ್ಕ. ಸಿದ್ದಾಪರಾದ ಸಾಬೀತಿಗೆ ಇನ್ನೊಂದೇ ಹೆಜ್ಜೆ ಬಾಕಿ. ನಾನು ಭಾವಿಸಿದಷ್ಟು ಧೈರ್ಯವಂತರಲ್ಲ ನೀವು. ನಿಮಗೂ ಭಯವಿದೆ, ಅದೇ ಈ ನೆಲದ ಕಾನೂನಿನ ಶಕ್ತಿ. ಏನಂತೀರಿ? ಎಂದು ಪ್ರಶ್ನಿಸಿದ್ದಾರೆ.

## ಸೆ.29ರಂದು ಉಚಿತ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ

■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ಹಾದಿಮನಿ ಆಸ್ಪತ್ರೆ ಮತ್ತು ಆಲಮೇಲ ಸಮಾನ ಮನಸ್ಕರ ಬಳಗ(ರಿ) ಇವರ ಸಂಯುಕ್ತ ಆಶ್ರಯದಲ್ಲಿ ಸೆ.29ರಂದು ಪಟ್ಟಣದಲ್ಲಿ ಬೃಹತ್ ಉಚಿತ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಈ ಶಿಬಿರದಲ್ಲಿ ಶ್ರೀ ರಾಮಸುಧಾ ಆಸ್ಪತ್ರೆಯ ನೇತ್ರ ತಜ್ಞ ಡಾ.ಗುರುರಾಜ ಕುಲಕರ್ಣಿ, ಮೂತ್ರಪಿಂಡ ತಜ್ಞ ಡಾ.ಸಂದೀಪ ಪಾಟೀಲ್, ಎಲುಬು-ಕೀಲು ತಜ್ಞ ಡಾ.ಪ್ರೀತಿಶ್ ಯಂಡಿಗೇರೆ, ಡಾ.ರವಿ ಬಿರಾದಾರ ಚಿಕಿತ್ಸೆ ನೀಡುವರು. ತಜ್ಞವೈದ್ಯರ ಸಲಹೆ



ಮೇರೆಗೆ ಉಚಿತವಾಗಿ ರಕ್ತ, ಮೂತ್ರ ತಪಾಸಣೆ ಮಾಡಲಾಗುತ್ತಿದ್ದು, ಸಂಧಿವಾತ, ಸ್ನಾಯು ಸೆಳೆತ, ಮೂಳೆ ಮುರಿತ ಮುಂತಾದ ಎಲುಬು-ಕೀಲುಗಳ ಸಮಸ್ಯೆ, ಅಂಧತ್ವ, ಕಣ್ಣಿನ ಪೊರೆ, ಬಿಪಿ, ಮಧುಮೇಹ (ಶುಗರ್), ಕಿಡ್ನಿ ಸ್ಟೋನ್ಸ್( ಹರಳುಗಳು), ಮೂತ್ರಕೋಶದ ಸೋಂಕು, ಕಿಡ್ನಿ ವೈಫಲ್ಯ, ಉರಿ ಮೂತ್ರ ಮುಂತಾದ ಸಮಸ್ಯೆಗಳಿಂದ ಬಳಲುತ್ತಿರುವವರು ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕೆಂದು ಡಾ.ಸಮೀರ ಹಾದಿಮನಿ, ಡಾ.ಜುನೇರಾ ಹಾದಿಮನಿ ತಿಳಿಸಿದ್ದಾರೆ

## ವಿವಿಧ ಬೇಡಿಕೆಗೆ ಆಗ್ರಹಿಸಿ ಗ್ರಾಮಾಡಳಿತ ಸಂಘದಿಂದ ಅನಿರ್ದಿಷ್ಟಾವಧಿ ಮುಷ್ಕರ

## ಬೇಡಿಕೆ ಈಡೇರುವವರೆಗೆ ಲೆಕ್ಕಣಿಗೆ ಬದಿಗಿಟ್ಟು ಮುಷ್ಕರ :ಗ್ವಾಳೇದ



■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ನಮ್ಮ ರಾಜ್ಯ ಗ್ರಾಮಾಡಳಿತ ಅಧಿಕಾರಿಗಳ ಕೇಂದ್ರ ಸಂಘದ ನಿರ್ದೇಶನದಂತೆ ಬೇಡಿಕೆ ಈಡೇರುವವರೆಗೆ ಲೆಕ್ಕಣಿಗೆ ಬದಿಗಿಟ್ಟು ಮುಷ್ಕರ ಮುಂದುವರೆಸಲಾಗುವುದು ಎಂದು ಗ್ರಾಮಾಡಳಿತ ಅಧಿಕಾರಿಗಳ ಸಂಘದ ತಾಲ್ಲೂಕು ಅಧ್ಯಕ್ಷ ಸಂಗಮೇಶ ಗ್ವಾಳೇದ ಹೇಳಿದರು.

ಪಟ್ಟಣದ ತಹಶೀಲ್ದಾರ ಕಾರ್ಯಾಲಯದ ಮುಂದೆ ಗುರುವಾರ ವಿವಿಧ ಬೇಡಿಕೆಗಳಿಗಾಗಿ ಆಗ್ರಹಿಸಿ ಗ್ರಾಮಾಡಳಿತ ಅಧಿಕಾರಿಗಳ ಕೇಂದ್ರ ಸಂಘ ಕರೆ ಕೊಟ್ಟ ಶಾಂತಿಯುತ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಬೆಂಬಲವಾಗಿ ಗುರುವಾರ ಇಲ್ಲಿನ ತಹಸೀಲ್ದಾರ್ ಕಚೇರಿ ಬಳಿ ತಾಲ್ಲೂಕು ಸಂಘದ ವತಿಯಿಂದ ಜರುಗಿದ ಮುಷ್ಕರದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಸರಕಾರ ನಮ್ಮ ಕೆಲಸಕ್ಕೆ ತಕ್ಕಂತೆ ಸಮಾನ ವೇತನ ನೀಡದೆ ಕೇವಲ ಕೆಲಸ ತೆಗೆದುಕೊಳ್ಳುವುದರಲ್ಲಿ ನಿರತವಾಗಿದೆ. ತಾಂತ್ರಿಕತೆ ಗೊತ್ತಿಲ್ಲದಿದ್ದರೂ ಹೆಚ್ಚಿನ ಪ್ರಮಾಣದಲ್ಲಿ ತಾಂತ್ರಿಕ ಕಾರ್ಯಗಳಲ್ಲಿ ತೊಡಗಿಸುತ್ತಿದ್ದು ಅದಕ್ಕೆ ಸಂಭಾವನೆ ನೀಡುತ್ತಿಲ್ಲ. ಈ ವಿಷಯದ ಕುರಿತು ಹಲವಾರು ವರ್ಷಗಳಿಂದ ಸರಕಾರದ ಮುಂದೆ ಬೇಡಿಕೆಯಿಟ್ಟು ಗಮನ ಸೆಳೆದರೂ ಯಾವುದೇ ಪ್ರಯೋಜನವಾಗಿಲ್ಲ. ಸರಕಾರದ 21 ಸೇವೆಗಳು ಗ್ರಾಮಾಡಳಿತದ ಮೂಲಕವೇ ಅನುಷ್ಠಾನಗೊಳ್ಳುತ್ತಿವೆ. ಆದರೂ ಸರಕಾರ ನಮ್ಮ ಮೇಲೆ ಕರುಣೆ ತೋರುತ್ತಿಲ್ಲ. ಅದಕ್ಕಾಗಿ ಇಂದು ಮೊಬೈಲ್ ಹಾಗೂ ಲೆಕ್ಕಣಿಕೆ ಸ್ಥಗಿತಗೊಳಿಸಿ ಅನಿರ್ದಿಷ್ಟವಾಗಿ ಪ್ರತಿಭಟನೆ ನಡೆಸಲಾಗುತ್ತಿದೆ. ನಮ್ಮ ಪ್ರಮುಖ ಬೇಡಿಕೆಗಳಾದ ಸಮಾನ ಕೆಲಸಕ್ಕೆ ಸಮಾನ ವೇತನದ ಜೊತೆಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿ ಕೊಡಬೇಕು. ಸುಸಜ್ಜಿತ ಕಚೇರಿ ಕಟ್ಟಡ, ಪೀಠೋಪಕರಣ, ಅಗತ್ಯ ಸಿಬ್ಬಂದಿ ಪೂರೈಸಬೇಕೆಂದು ಸರಕಾರವನ್ನು ಆಗ್ರಹಿಸಿದರು. ಗ್ರಾಮಾಡಳಿತ ಸಂಘದ ಅನೀಲಕುಮಾರ ರಾಠೋಡ, ಬಸವರಾಜ ಹಂದ್ರಾಳ, ಪ್ರಕಾಶ ಬನ್ನೆಟ್ಟಿ, ಸದ್ದಾಮ ಮುಲ್ಲಾ, ಬಸಮ್ಮ ಬಾಟಿ, ಸಿದ್ದು ನಾಯ್ಕೋಡಿ, ರಾಮನಗೌಡ ರಾಂಪೂರ, ವಿಠ್ಠಲ ವಾಲೀಕಾರ, ಯಮುನಾ ಗಂಗಶೆಟ್ಟಿ, ರವಿ ಮೆಟಗಾರ ಹಾಗೂ ಸಂಘದ ಸದಸ್ಯರು, ಗ್ರಾಮಸಹಾಯಕರು ಇದ್ದರು.

## ಪತ್ರಕರ್ತರಿಗೆ ಉಚಿತ ಬಸ್ ಪಾಸ್: ಸಂಜೀವರಾವ್ ಹರ್ಷ

■ ಉದಯರಶ್ಮಿ ದಿನಪತ್ರಿಕೆ



ಕೆಂಭಾವಿ: ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಯೋಜನೆಗೆ ಅಂತಿಮ ಮುದ್ರೆ ಒತ್ತಿದ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ನಡೆ ಸ್ವಾಗತಾರ್ಹ ಎಂದು ಹಿರಿಯ ಪತ್ರಕರ್ತ ಸಂಜೀವರಾವ್ ಕುಲ್ಕರ್ಣಿ ಹರ್ಷ ವ್ಯಕ್ತಪಡಿಸಿದರು.ಈ ಕುರಿತು ಶುಕ್ರವಾರ ಪ್ರತಿಕ್ರಿಯಿಸಿದ ಅವರು, ದಶಕಗಳ ಬೇಡಿಕೆ ಈಡೇರಿಕೆಗೆ ಸಂತಸ ವ್ಯಕ್ತಪಡಿಸುತ್ತಾ, ಈ ಆದೇಶದಿಂದ ರಾಜ್ಯದ ಅರ್ಹ ಗ್ರಾಮೀಣ ಪ್ರದೇಶದ ಪತ್ರಕರ್ತರಿಗೆ ಬಹಳಷ್ಟು ಸಹಕಾರಿಯಾಗಲಿದೆ ಎಂದವರು, ಪ್ರಣಾಳಿಕೆಯಲ್ಲಿ ತಿಳಿಸಿದಂತೆ ನುಡಿದಂತೆ ನಡೆದ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಧನ್ಯವಾದ ಅರ್ಪಿಸಿದ ಅವರು ಯೋಜನೆ ಜಾರಿಗೊಳಿಸಲು ಕಾರಣೀಭೂತರಾದ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಮಾಧ್ಯಮ ಸಲಹೆಗಾರ ಕೆ ವಿ ಪ್ರಭಾಕರ, ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಅವರಿಗೆ ಅಭಿನಂದನೆ ಸಲ್ಲಿಸಿದರು.

## ಅ.7ರಂದು ಸಚಿವ ಎಂ.ಬಿ.ಪಾಟೀಲ ಜನ್ಮದಿನದಂಗವಾಗಿ ಸಸಿ ನೆಡುವಿಕೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವೃಕ್ಷೋಥಾನ್ ಹೆರಿಟೇಜ್ ರನ್-2024ಕ್ಕೆ ಪೂರಕವಾಗಿ ಬಿ.ಎಲ್.ಡಿ.ಇ ಸಂಸ್ಥೆಯ ಎಲ್ಲ ಸಿಬ್ಬಂದಿ ಅ.7ರಂದು ಸಂಸ್ಥೆಯ ಅಧ್ಯಕ್ಷ ಎಂ. ಬಿ. ಪಾಟೀಲ ಅವರ ಜನ್ಮದಿನದ ಅಂಗವಾಗಿ ಸಸಿ ನೆಟ್ಟು ಅದನ್ನು ಪೋಷಿಸುವ ಜವಾಬ್ದಾರಿ ತೆಗೆದುಕೊಳ್ಳೋಣ ಎಂದು ಸಂಸ್ಥೆಯ ಮುಖ್ಯ ಸಲಹೆಗಾರ ಮತ್ತು ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ರಜಿಸ್ಟ್ರಾರ ಡಾ. ಆರ್. ವಿ. ಕುಲಕರ್ಣಿ ಹೇಳಿದ್ದಾರೆ.ಗುರುವಾರ ಮುಸ್ಸಂಜೆ ವಚನಪಿತಾಮಹ ಡಾ. ಫ. ಗು. ಹಳಕಟ್ಟಿ ಸಂಶೋಧನೆ ಕೇಂದ್ರದಲ್ಲಿ ವೃಕ್ಷೋಥಾನ್ ಹೆರಿಟೇಜ್ ರನ್-2024ರ ಅಂಗವಾಗಿ ನಡೆದ ಸಂಸ್ಥೆಯ ನಾನಾ ಹೈಸ್ಕೂಲುಗಳ ಮುಖ್ಯೋಪಾಧ್ಯಾಯರು ಮತ್ತು ಕಾಲೇಜುಗಳ ಪ್ರಾಚಾರ್ಯರ ಸಭೆಯಲ್ಲಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಅರಣ್ಯೀಕರಣಕ್ಕಾಗಿ ಎಂ. ಬಿ. ಪಾಟೀಲ ಅವರು ವೃಕ್ಷೋಥಾನ್ ಹೆರಿಟೇಜ್ ರನ್ ಪ್ರಾರಂಭಿಸುವ ಮೂಲಕ ಹಸಿರುಕರಣಕ್ಕೆ ನಾಂದಿ ಹಾಡಿದ್ದಾರೆ. ಈ ಕಾರ್ಯಕ್ರಮಕ್ಕೆ ನಾವೆಲ್ಲರೂ ಕೈಜೋಡಿಸೋಣ. ಅ. 7 ರಂದು ಎಂ. ಬಿ. ಪಾಟೀಲರ ಜನ್ಮದಿನದ ಹಿನ್ನೆಲೆಯಲ್ಲಿ ಎಲ್ಲ ಸಿಬ್ಬಂದಿ ಒಂದೊಂದು ಸಸಿ ನೆಟ್ಟು ಅವುಗಳನ್ನು ದತ್ತು ಪಡೆದು ಬೆಳೆಸೋಣ. ಪ್ರತಿವರ್ಷ ಅವುಗಳ ಆಡಿಟ್ ಮಾಡಿಸಿ ಸಚಿವರ ಸಂಕಲ್ಪದಂತೆ ಜಲ, ವೃಕ್ಷ, ಶಿಕ್ಷಣ ಜೊತೆಗೆ ಆರೋಗ್ಯ ಕ್ಷೇತ್ರದಲ್ಲಿಯೂ ಉತ್ತಮ



ಸೇವೆ ಒದಗಿಸಲು ಪ್ರಯತ್ನಿಸೋಣ. ಅಲ್ಲದೇ, ಸಂಸ್ಥೆಯ ಪ್ರತಿಯೊಂದು ಕಾರ್ಯಕ್ರಮಗಳಲ್ಲಿ ಹೂವು, ಹಾರ, ಶಾಲು ಬಳಸುವ ಬದಲು ಅತಿಥಿಗಳಿಗೂ ನೋಟ್ ಬುಕ್ ನೀಡೋಣ ಎಂದು ಹೇಳಿದರು. ಆಡಳಿತಾಧಿಕಾರಿ ಎಸ್. ಎಚ್. ಲಗಳಿ ಮಾತನಾಡಿ, ಮುಂದಿನ ಹತ್ತಿಪ್ಪತ್ತು ವರ್ಷಗಳಲ್ಲಿ ಜಗತ್ತಿನ ಪರಿಸರದಲ್ಲಿ ಸಾಕಷ್ಟು ಬದಲಾವಣೆಗಳಾಗಲಿವೆ. ಈಗಿನಿಂದಲೇ ಹವಾಮಾನ ವೈಪರಿತ್ಯ ತಡೆಯಲು ಎಲ್ಲರೂ ಕಾರ್ಯೋನ್ಮುಖರಾಗಬೇಕಿದೆ. ಸಚಿವ ಎಂ. ಬಿ. ಪಾಟೀಲರು ಜಲಸಂಪನ್ಮೂಲ ಸಚಿವರಾದಾಗಿನಿಂದ ಈ ನಿಟ್ಟಿನಲ್ಲಿ ಅರಣ್ಯೀಕರಣಕ್ಕೆ ಒತ್ತು ನೀಡಿದ್ದಾರೆ. ಮುಂದಿನ ಪೀಳಿಗೆಗಾಗಿ ನಾವೆಲ್ಲರೂ ನಮ್ಮ ಕರ್ತವ್ಯವನ್ನು ನಿರ್ವಹಿಸಬೇಕಾಗಿದೆ ಎಂದು ಹೇಳಿದರು. ವೃಕ್ಷೋಥಾನ್ ಹೆರಿಟೇಜ್ ರನ್ ಸಂಚಾಲಕ ಡಾ.ಮುರುಗೇಶ ಪಟ್ಟಣಶೆಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಬಿ.ಎಲ್.ಡಿ.ಇ ಸಂಸ್ಥೆಯ ಆಡಳಿತಾಧಿಕಾರಿಗಳಾದ ಬಿ. ಆರ್. ಪಾಟೀಲ, ವಿಲಾಸ ಪ್ರಾಚಾರ್ಯರು ಉಪಸ್ಥಿತರಿದ್ದರು.

"ಸಚಿವ ಎಂ.ಬಿ.ಪಾಟೀಲ ಅವರು ಪ್ರಾರಂಭಿಸಿದ ಕೋಟಿ ವೃಕ್ಷ ಅಭಿಯಾನದಿಂದಾಗಿ ಇಂದು ಜಿಲ್ಲೆಯಲ್ಲಿ ಅರಣ್ಯೀಕರಣ ಹೆಚ್ಚಾಗಿದೆ. ಬಹಳಷ್ಟು ಕಡೆಗಳಲ್ಲಿ ನರ್ಸರಿಗಳೂ ಪ್ರಾರಂಭವಾಗಿದ್ದು, ಕಳೆದ ಮೂರ್ನಾಲ್ಕು ದಿನಗಳ ಹಿಂದೆ 34 ವರ್ಷಗಳಲ್ಲಿಯೇ ಅತೀ ಹೆಚ್ಚು ಮಳೆ ಸುರಿದಿದೆ. ಇದು ಅರಣ್ಯೀಕರಣದ ಪ್ರಭಾವದಿಂದ ಆಗಿರಬಹುದಾದ ಸಾಧ್ಯತೆ ಹೆಚ್ಚಾಗಿದೆ. ಪರಿಸರದಲ್ಲಿ ಬದಲಾವಣೆ ತರುವುದು ಸಾಮಾನ್ಯ ಸಂಗತಿಯಲ್ಲ. ಹುಲ್ಲುಕಡ್ಡಿಯೂ ಬೆಳೆಯದ ಕರಾಡ ದೊಡ್ಡಿಯಲ್ಲಿ ಈಗ ನೆಟ್ಟಿರುವ ಸಸಿಗಳು ಭವಿಷ್ಯದಲ್ಲಿ ದಟ್ಟ ಕಾಡುಗಳಾಗಿ ಮಾರ್ಪಡಲಿವೆ. ಶ್ರೀ ಸಿದ್ಧೇಶ್ವರ ಸ್ವಾಮೀಜಿಗಳ ಗೌರವಾರ್ಥವಾಗಿ ಮಮದಾಪುರ ಬಳಿ ಸಚಿವರು ಸರಕಾರಿ ಜಮೀನಿನಲ್ಲಿ ಅರಣ್ಯ ನಿರ್ಮಿಸಲು ಕ್ರಮ ಕೈಗೊಂಡಿದ್ದು, ಅಲ್ಲಿ ಜೀವವೈವಿಧ್ಯತೆ ಬದಲಾಗುತ್ತಿದೆ. ಆಲಮಟ್ಟಿಯಲ್ಲಿ 100 ಟಿಎಂಸಿ ಹೆಚ್ಚುವರಿ ಸಂಗ್ರಹಿಸಿದಾಗ ಆ ನೀರು ನಮ್ಮ ಜಿಲ್ಲೆಗೆ ಲಭಿಸಲಿದೆ. ಅಲ್ಲದೇ, ವಿಮಾನ ನಿಲ್ದಾಣ ಪೂರ್ಣಗೊಂಡ ಬಳಿಕ ಜಿಲ್ಲೆ ಮತ್ತಷ್ಟು ಅಭಿವೃದ್ಧಿಯಾಗಲಿದೆ. ಪ್ರತಿವರ್ಷ ಡಿಸೆಂಬರ್ 2-3 ನೇ ವಾರದಲ್ಲಿ ವೃಕ್ಷೋಥಾನ್ ಆಯೋಜನೆಗೆ ನಿರ್ಧರಿಸಲಾಗಿದ್ದು, ಈ ಕಾರ್ಯಕ್ರಮ ನಿರಂತರವಾಗಿರಬೇಕು. ಈ ಬಾರಿ ಡಿಸೆಂಬರ್ 22 ರಂದು ನಡೆಯಲಿರುವ ವೃಕ್ಷೋಥಾನ್ ಹೆರಿಟೇಜ್ ರನ್ ನಲ್ಲಿ ಎಲ್ಲರೂ ತಪ್ಪದೆ ಪಾಲ್ಗೊಳ್ಳಬೇಕು ಎಂದು ಹೇಳಿದರು."


■ - ಡಾ.ಮಹಾಂತೇಶ ಬಿರಾದಾರ
ಸಚಿವ ಎಂ.ಬಿ.ಪಾಟೀಲ ಅವರ ಸಾರ್ವಜನಿಕ ಸಂಪರ್ಕಾಧಿಕಾರಿ

ಭೀಕರ ಅಪಘಾತದಲ್ಲಿ ನಾಲ್ವರ ದುರಂತ ಅಂತ್ಯ | ಕಣ್ಣೀರ ಕಡಲಲ್ಲಿ ಕುಟುಂಬಗಳು | ನ್ಯಾಯ ಕೊಡಿಸುವವರಿಗೆ ಅನ್ಯಾಯ

# ದೇವರ ದರ್ಶನಕ್ಕೆಂದು ಹೋದವರು ಮಸಣ ಸೇರಿದ ಕಥೆ-ವ್ಯಥೆ


■ ಉದಯರಶ್ಮಿ ದಿನಪತ್ರಿಕೆ
■ - ಚೇತನ ಶಿವಶಿಂಪಿ

ಮುದ್ದೇಬಿಹಾಳ: ಮನೆ ಮಾರಿ ಮಗನ ಉದ್ಯೋಗಕ್ಕಾಗಿ ಕಾರು ಕೊಡಿಸಿದ್ದ ಒಂದು ಕುಟುಂಬ, ಸಾರ್ವಜನಿಕರ ನ್ಯಾಯವನ್ನು ಸರಳವಾಗಿ ಬಗೆಹರಿಸಿ ಸಾಕಷ್ಟು ನೊಂದ ಕುಟುಂಬಗಳಿಗೆ ಆಸರೆಯಾಗಿದ್ದ ಸೀದಾ ಸಾದಾ ನಾಯಕನ ಇನ್ನೊಂದು ಕುಟುಂಬ, ಘಟನೆಯೊಂದರಲ್ಲಿ ತನ್ನ ಎರಡೂ ಕೈಗಳನ್ನು ಕಳೆದುಕೊಂಡು ಎದೆಗುಂದದೆ ಬಾಳ ಪಯಣದಲ್ಲಿ ದಿನ ನಿತ್ಯ ಹೋರಾಟ ಮಾಡುತ್ತ ಸಾಗುತ್ತಿದ್ದ ವ್ಯಕ್ತಿಯ ಮತ್ತೊಂದು ಕುಟುಂಬ, ಬಡತನದ ಕುಟುಂಬದಲ್ಲಿ ಬೆಳೆದು ಗುತ್ತಿದಾರನಾಗಿ ಹೆಸರುವಾಸಿಯಾಗಿದ್ದವನ ಕುಟುಂಬ, ಈ ನಾಲ್ಕೂ ಕುಟುಂಬಗಳು ಸಧ್ಯ ಕಣ್ಣೀರಿನಲ್ಲಿ ಕೈ ತೊಳೆಯುತ್ತಿವೆ. ಈ ಕುಟುಂಬಗಳು ಕಣ್ಣೀರಿಡಲು ಕಾರಣವಾಗಿದ್ದೇ ಆ ಭಯಾನಕ ವಾಹನ ಅಪಘಾತ. ಬುಧವಾರ ಮಧ್ಯರಾತ್ರಿ ಮುದ್ದೇಬಿಹಾಳ-ಹುನಗುಂದ ಹೈವೇ ನಲ್ಲಿ ಸಂಭವಿಸಿದ ಭೀಕರ ಅಪಘಾತದಲ್ಲಿ ನಡೆದ ನಾಲ್ವರ ದುರಂತ ಅಂತ್ಯಕ್ಕೆ ನಾಲ್ಕೂ ಕುಟುಂಬಗಳಿಗೆ ಬರಸಿಡಿಲು ಬಡಿದಂತಾಗಿದೆ. ದೇವರ ದರ್ಶನಕ್ಕೆಂದು ಮನೆಯಿಂದ ಹೊರಟವರು ಮರಳಿ ಮನೆಗೆ ಬಾರದೆ ಮಸಣದತ್ತ ಪಯಣ ಬೆಳೆಸಿದರೆ ಅವರನ್ನೇ ನಂಬಿದ ಜೀವಗಳಿಗೆ ಹೇಗೆ ಆಗ್ಬೇಡಾ ಹೇಳಿ. ಊಹೆ ಮಾಡ್ಕೊಳ್ಳೋಕೂ ಸಾಧ್ಯವಾಗದ ರೀತಿಯಲ್ಲಿ ಆ ದುರಂತ ನಡೆದು ಹೋಗಿದೆ. ಅಂದು ಯಾವುದೋ ಒಂದು ನ್ಯಾಯ ಬಗೆಹರಿಸುವ ಉತ್ಸಾಹದಲ್ಲಿ ಮುದ್ದೇಬಿಹಾಳದ



ಮಹಾಂತೇಶ ನಗರದ ರಾಮಣ್ಣ ನಾಯಕಮಕ್ಕಳ, ಬಿದರಕುಂದಿಯ ಗುತ್ತಿಗೆದಾರ ಲಕ್ಷ್ಮಣ ವಡ್ಡರ ಮತ್ತು ಬೈಲಪ್ಪ ಬಿರಾದಾರ ಈ ಮೂವರು ಮಹಮ್ಮದ ರಫೀಕ ಎನ್ನುವವನ ಕಾರನ್ನು ಬಾಡಿಗೆಗೆ ತೆಗೆದುಕೊಂಡು ಹೊರಟಿದ್ದಾರೆ. ನ್ಯಾಯ ಬಗೆಹರಿಸಿ ಬರುವಾಗ ಮಾರ್ಗ ಮಧ್ಯದಲ್ಲಿ ಹೊಸಪೇಟೆಯ ಹುಲಿಗೆಮ್ಮ ದೇವಿಯ ದರ್ಶನ ಪಡೆದಿದ್ದಾರೆ. ಮರಳಿ ತಮ್ಮೂರ ಕಡೆಗೆ ಬರುವಾಗ ಹೊಂಚು ಹಾಕಿದ್ದ ಜವರಾಯ ಈ ನಾಲ್ವರನ್ನೂ ಬಲಿ ಪಡೆದು ನಾಲ್ಕೂ ಕುಟುಂಬಗಳ ಕಣ್ಣೀರಿಗೆ ಕಾರಣನಾಗಿದ್ದಾನೆ.

ಇಲ್ಲಿ ಶಿವನ ಪಾದ ಸೇರಿದವರಲ್ಲಿ ವಾಹನ ಚಾಲಕ ಮಹಮ್ಮದ ರಫೀಕ ಮುದ್ದೇಬಿಹಾಳ ತಾಲೂಕಿನ ಗುಡ್ನಾಳ ಗ್ರಾಮದ 23ರ ಹರೆಯದ ಯುವಕ. ಇನ್ನೂ ಮದುವೆಯಿಲ್ಲ. ಉದ್ಯೋಗಕ್ಕಾಗಿ ಪರದಾಡುವಾಗ ತಮ್ಮ ಮನೆಯೊಂದನ್ನ ಮಾರಿ ಕಾರು ಕೊಡಿಸಿದ್ದ ಆತನ ಪಾಲಕರಿಗೆ ಅದೇ ಕಾರಿನಲ್ಲಿ



ಅವನ ಅಂತ್ಯವಾಗುತ್ತೆ ಅಂತ ಕನಸು-ಮನಸಲ್ಲೂ ಎಣಿಸಿರಲಿಲ್ಲ. ಇದು ಯುವಕನ ಕಥೆಯಾದರೆ ಕಳೆದ 10 ವರ್ಷಗಳ ಹಿಂದೆ ತನ್ನ ಎರಡೂ ಕೈಗಳನ್ನು ಕಳೆದುಕೊಂಡ ತಾಲೂಕಿನ ಬಿದರಕುಂದಿ ಗ್ರಾಮದ ಬೈಲಪ್ಪ ಬಿರಾದಾರ(46) ಯಾವತ್ತೂ ಎದೆಗುಂದದೆ ಪ್ಲಾಸ್ಟಿಕ್ ಕೈಗಳ ಸಹಾಯದಿಂದ ತನ್ನ ಭೂಲೋಕದ ಪಯಣವನ್ನು ಮುಂದುವರೆಸಿದ್ದು ಬುಧವಾರ ತನ್ನ ಪಯಣ ಅಂತ್ಯವಾಗುವ ಬಗ್ಗೆ ಅವಗೆ ಯಾವ ಸುಳಿವೂ ಸಿಕ್ಕಿರಲಿಲ್ಲ. ಮತ್ತೋರ್ವ ವಾಲ್ಮೀಕಿ ಸಮಾಜದ ಹೆಸರಾಂತ ನಾಯಕ ರಾಮಣ್ಣ ನಾಯಕಮಕ್ಕಳ(57) ನ್ಯಾಯ ಬಗೆಹರೆಸುವಲ್ಲಿ ಎತ್ತಿದ ಕೈ. ತನ್ನ ಬಳಿ ನ್ಯಾಯ ಅಂತ ಬಂದವರಿಗೆ ಸರಿಯಾದ ನ್ಯಾಯ ಕೊಡಿಸುವವರೆಗೂ ಸಮಾಧಾನ ವಿರುತ್ತಿರಲಿಲ್ಲ. ಆದರೆ ತನಗೇ ಅನ್ಯಾವಾಗುತ್ತದೆಂಬ ಕಲ್ಪನೆಯೂ ಆತನಿಗಿರಲಿಲ್ಲ. ಕೊನೆಯದವ ಬಡ ಕುಟುಂಬದಲ್ಲಿ ಹುಟ್ಟಿ ಗುತ್ತಿಗೆದಾರನಾಗಿ ಸಾಕಷ್ಟು ಹೆಸರು ಮಾಡಿದ್ದ ಲಕ್ಷ್ಮಣ ವಡ್ಡರ(55). ಈತನೂ ನ್ಯಾಯ ಪಂಚಾಯತಿ ನಡೆಸುವಲ್ಲಿ ಸಾಕಷ್ಟು ಪಳಗಿದ್ದ. ಈ ನಾಲ್ವರ ಅಧ್ಯಾಯದ ಅಂತಿಮ ಪುಟಗಳನ್ನು ಆ ಕಾರಿನಲ್ಲಿ ಬರೆದಿದ್ದ ಯಮರಾಜ. ದರ್ಶನ ಪಡೆದು ಮರಳಿ ತಮ್ಮೂರಿಗೆ ಬರುವಾಗ ರದ್ದಿ ತುಂಬಿಕೊಂಡು ಹೊರಟಿದ್ದ ದೊಡ್ಡ ಲಾರಿಗೆ ಮುಖಾ ಮುಖಿ ಡಿಕ್ಕಿಯಾಗಿ ಕ್ಷಣ ಮಾತ್ರದಲ್ಲಿ ಕಾರಿನಲ್ಲಿದ್ದವರ ಪ್ರಾಣ ಪಕ್ಷಿ ಹಾರಿ ಹೋಗಿದೆ.

ಈ ನಾಲ್ವರ ದುರಂತ ಅಂತ್ಯ ರಾತ್ರಿ ವೇಳೆ ಪ್ರಯಾಣ ಸೂಕ್ತವಲ್ಲ ಎನ್ನುವ ಸಂದೇಶ ಸಾರಿ ನಮ್ಮನ್ನೇ ನಂಬಿದ ಜೀವಗಳ ಬಗ್ಗೆ ಒಂದು ಕ್ಷಣ ಯೋಚಿಸಲು ದಾರಿ ಮಾಡಿ ಕೊಟ್ಟಿದೆ. ಯಾರೊಬ್ಬರೂ ರಾತ್ರಿ ವೇಳೆ ಪ್ರಯಾಣ ಬೆಳೆಸದೇ ಬೆಳಕಿನಲ್ಲಿ ಸುರಕ್ಷತಾ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಿ ಪ್ರಯಾಣ ಬೆಳೆಸಬೇಕೆಂಬುದು 'ಉದಯ ರಶ್ಮಿ' ಸದಾಶಯ.

## ಇಂಡಿಯಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ಪ್ರತಿಭಟನೆ



■ ಉದಯರಶ್ಮಿ ದಿನಪತ್ರಿಕೆ

ಇಂಡಿ: ವಿವಿಧ ಬೇಡಿಕೆಗೆ ಆಗ್ರಹಿಸಿ ಕೈಗೆ ಕಪ್ಪು ಪಟ್ಟಿ ಕಟ್ಟಿಕೊಂಡು ಗ್ರಾಮ ಆಡಳಿತ ಅಧಿಕಾರಿಗಳು ತಾಲೂಕು ಆಡಳಿತ ಸೌಧದ ಎದುರು ಗುರುವಾರದಿಂದ ಅನಿರ್ಧಿಷ್ಟಾವಧಿ ಮುಷ್ಕರ ಪ್ರಾರಂಭಿಸಿ ಕಂದಾಯ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ ಅವರಿಗೆ ಮನವಿ ಸಲ್ಲಿಸಿದರು.

ರಾಜ್ಯದಾದ್ಯಂತ ರಾಜ್ಯ ಸಂಘದ ಪ್ರತಿಭಟನೆ ಕರೆ ಹಿನ್ನೆಲೆಯಲ್ಲಿ ಇಂಡಿ ತಾಲ್ಲೂಕಿನಲ್ಲಿಯೂ ಅನಿರ್ಧಿಷ್ಟಾವಧಿ ಮುಷ್ಕರ ನಡೆಸಲಾಗುತ್ತದೆ ಎಂದು ಗ್ರಾಮ ಆಡಳಿತ ತಾಲೂಕು ಘಟಕದ ಅಧ್ಯಕ್ಷ ಯಲ್ಲು ಪೂಜಾರಿ ತಿಳಿಸಿದ್ದಾರೆ.

ಈ ವೇಳೆ ಮಾತನಾಡಿದ ಮುಖಂಡರು, ಗ್ರಾಮ ಆಡಳಿತ ಅಧಿಕಾರಿಗಳ ಬೇಡಿಕೆಗಳಾದ ತಾಂತ್ರಿಕ ಹುದ್ದೆಗಳಿಗೆ ನೀಡುವ ವೇತನ ಶ್ರೇಣಿ ನೀಡಬೇಕು, ಕಚೇರಿ, ಗುಣಮಟ್ಟದ ಮೊಬೈಲ್, ಡೇಟಾ, ಸಿಮ್ ನೀಡಬೇಕು. ಪ್ರಿಂಟರ್ ಹಾಗೂ ಸ್ಕ್ಯಾನರ್, ಲ್ಯಾಪ್‌ಟಾಪ್, ಗೂಗಲ್ ಕ್ರೋಮ್ ಬುಕ್ ಒದಗಿಸಬೇಕು. ಸರಕಾರಿ ರಜಾ ದಿನಗಳಂದು ಮೆಮೊ ಕೊಡುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ಅಂತರ ಜಿಲ್ಲಾ ವರ್ಗಾವಣೆ ನಿಯಮ 16 (ಎ) ಉಪಖಂಡ (2) ಮರುಸೇರ್ಪಡೆ ಮಾಡಬೇಕು, ಪತಿ–ಪತ್ನಿ ವರ್ಗಾವಣೆ ಪ್ರಕರಣವನ್ನು ಪರಿಗಣಿಸಬೇಕು ಸೇರಿದಂತೆ ಹಲವು ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿದರು.

ಇದೇ ಸಂದರ್ಭದಲ್ಲಿ ಶಿರಸ್ತೆದಾರ ಬಿ.ಎ. ರಾವೂರ ಪ್ರತಿಭಟನೆಗೆ ಬೆಂಬಲ ಸೂಚಿಸಿ ಮಾತನಾಡಿ, ಗ್ರಾಮ ಆಡಳಿತ ಅಧಿಕಾರಿಗಳಿಗೆ ಅನೇಕ ಸಮಸ್ಯೆಗಳಿದ್ದು, ಅವುಗಳನ್ನು ಸರಕಾರ ಶೀಘ್ರವಾಗಿ ಪರಿಹರಿಸಬೇಕು. ಅತೀ ಹೆಚ್ಚಾಗಿ ಗ್ರಾಮೀಣ ಭಾಗದ ರೈತರ ಕೆಲಸ ಕಾರ್ಯಗಳು ಮಾಡುತ್ತಿದ್ದು, ಮೊಬೈಲ್ ನೆಟ್ ವರ್ಕ ಸೇರಿದಂತೆ, ಪುಡಾರಿ ಪುಂಡರು ತಕರಾರು ಒತ್ತಡ ಕೂಡಾ ಅವರ ಮೇಲಿದೆ. ಹಾಗಾಗಿ ಸರಕಾರ ಸಕಾರಾತ್ಮಕ ಸ್ಪಂದಿಸುವ ಕಾರ್ಯ ಮಾಡಬೇಕು ಎಂದು ಹೇಳಿದರು.

> "ಗ್ರಾಮ ಆಡಳಿತ ಅಧಿಕಾರಿಗಳು ವಿವಿಧ ಬೇಡಿಕೆ ಈಡೇರಿಕೆಗಾಗಿ ಮುಷ್ಕರ ಪ್ರಾರಂಬಿಸಿದರೂ ಸಹ ರೈತರು ಹಾಗೂ ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗದಂತೆ ಪ್ರತೇಕ್ಯ ವ್ಯವಸ್ಥೆ ಆಡಳಿತ ಸೌಧದಲ್ಲಿ ಮಾಡಲಾಗಿದೆ."
> ■ ಅಬೀದ್ ಗದ್ಯಾಳ
> ಕಂದಾಯ ಉಪವಿಭಾಗಾಧಿಕಾರಿ

ಈ ಸಂದರ್ಭದಲ್ಲಿ ಶಿರಸ್ತೆದಾರ, ಆರ್.ಬಿ. ಮೂಗಿ, ಕಂದಾಯ ನಿರೀಕ್ಷಕ ಎಚ್.ಎಸ್. ಗುನ್ನಾಪುರ, ಗ್ರಾಮ ಆಡಳಿತ ಸಂಘದ ಉಪಾಧ್ಯಕ್ಷ ಸಿದ್ದು ಲಾಳಸಂಗಿ, ಗಡ್ಡೆಪ್ಪ ಅವಜಿ, ಕೆ.ಎಸ್. ಚೌಧರಿ, ಪಿ.ಎಲ್. ಹೂಗಾರ, ಶಿವು ವಾಲಿಕಾರ, ಪ್ರಕಾಶ ಚವಡಿಹಾಳ, ಎಮ್.ಆರ್. ರಾಠೋಡ, ಎಸ್.ಎಸ್. ಪೂಜಾರಿ, ಎಸ್.ಎಸ್. ಹಿರೇಬೇವನೂರ, ರವಿ ಪೂಜಾರಿ, ಶ್ರೀಶೈಲ ಹಂಚನಾಳ, ಎಸ್.ಎಸ್ ಮೊದಿ, ಪ್ರವೀಣ ಲಮಾಣಿ, ರವಿ ಪಾದಗಟ್ಟಿ, ಜಿ.ಎಮ್. ಬಿರಾದಾರ, ಎಸ್.ಎಸ್. ಬಿರಾದಾರ, ಸತೀಶ ಮಂಗಳವಾಡೆ, ವಿದ್ಯಾ ಸರಸಂಬಿ, ಭೂಮಿಕಾ ಅವರಾದಿ, ಕವಿತಾ ಕರಜಗಿ, ಈರಮ್ಮ ಜೋಗುರ, ಸವಿತಾ ಹಚಡದ ಎಮ್.ಎಮ್ ನಧಾಪ್, ಡಬ್ಲ್ಯೂ.ಐ. ಇಂಡಿಕರ, ಶಂಕರ್ ಕಲಕೇರಿ, ಮಣಿಕಂಠ ಗೊಂದಳಿ, ಬಸವರಾಜ ಅವಜಿ ಸೇರಿದಂತೆ ಉಪಸ್ಥಿತರಿದ್ದರು.

## ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮದ ಅಧ್ಯಕ್ಷರ ಜಿಲ್ಲಾ ಪ್ರವಾಸ

ವಿಜಯಪುರ: ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತದ (ಕೆಪೆಕ್) ಅಧ್ಯಕ್ಷರಾದ ಬಿ.ಎಚ್.ಹರೀಶ ಅವರು ಸೆ.27 ಹಾಗೂ ಸೆ.28ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ. ಸೆ.27 ರಂದು ಸಂಜೆ 5:30ಕ್ಕೆ ಬಾಗಲಕೋಟೆಯಿಂದ ಹೊರಟು, ವಿಜಯಪುರಕ್ಕೆ ಆಗಮಿಸಿ ವಾಸ್ತವ್ಯ ಮಾಡುವರು. ಸೆ.28ರ ಬೆಳಿಗ್ಗೆ 9 ಗಂಟೆಯಿಂದ 10 ಗಂಟೆಯವರೆಗೆ ಶೀತಲಗೃಹ ಘಟಕಗಳಿಗೆ ಭೇಟಿ ನೀಡುವರು. ಬೆಳಿಗ್ಗೆ 10 ರಿಂದ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ತೋಟಗಾ–ರಿಕಾ ಉಪ ನಿರ್ದೇಶಕರು, ಕೃಷಿ ಮಾರುಕಟ್ಟೆ ಉಪ ನಿರ್ದೇಶಕರು, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಉಪ ನಿರ್ದೇಶಕರು ಹಾಗೂ ಜಂಟಿ ನಿರ್ದೇಶಕರು ಕೃಷಿ ಇಲಾಖೆ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಹೊರ ಗುತ್ತಿಗೆ ಪೌರಕಾರ್ಮಿಕರನ್ನು ಖಾಯಾಂಗೊಳಿಸಲು ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ : ಎಲ್ಲಾ ಗುತ್ತಿಗೆ ಮುನ್ಸಿಪಲ್ ಕಾರ್ಮಿಕರ ಖಾಯಂಮತಿಗಾಗಿ ನೇರ ಪಾವತಿ ಅಡಿಯಲ್ಲಿ ಸಮಾನ ವೇತನ ಜಾರಿಗೆ ಒತ್ತಾಯಿಸಬೇಕೆಂದು ಪ್ರತಿಭಟನೆ ಹಮ್ಮಿಕೊಂಡು ಜಿಲ್ಲಾಧಿಕಾರಿ ಮುಖಾಂತರ ಮುಖ್ಯಮಂತ್ರಿಯವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ ಮುನ್ಸಿಪಲ್ ಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷ ಲಕ್ಷ□□ಣ ಹಂದ್ರಾಳ ಮಾತನಾಡಿ, ರಾಜ್ಯದ ನಗರ ಸ್ಥಳಿಯ ಸಂಸ್ಥೆಗಳಾದ ಮಹಾನಗರ ಪಾಲಿಕೆಗಳಲ್ಲಿ. ಗುತ್ತಿಗೆ, ಹೊರ ಗುತ್ತಿಗೆ, ಆಧಾರಿತ ನೇರ ಪಾವತಿ ಪೌರಕಾರ್ಮಿಕರು, ಲೋಡರ್, ಕಸದ ಮತ್ತು ಇತರ ವಾಹನ ಚಾಲಕರು, ಸಹಾಯಕರು, ಕ್ಲಿನರ್ ಗಳು, ಸ್ಯಾನಿಟರಿ ಸುಪರವೈಜರ್‌ಗಳು, ಪಾರ್ಕ, ಸ್ಮಶಾನ, ಯು.ಜಿ.ಡಿ, ಘನತಾಜ್ಯ ವಿಲೆವಾರಿ, ಯು.ಜಿ.ಡಿ. ನೀರು ಸಂಸ್ಕರಣಾ ಕಾರ್ಮಿಕರು, ಕಳೆದ 15–20 ವರ್ಷಗಳಿಂದ ನಿರಂತರವಾಗಿ ನಾಗರಿಕರಿಗೆ ಅಗತ್ಯವಾದ ಸ್ವಚ್ಚತೆ ಯು.ಜಿ.ಡಿ. ನಿರ್ವಾಹಣೆ ವಿಭಾಗದಲ್ಲಿ ನಿರಂತರ ದುಡಿಯುತ್ತಿರುವ ಕಾರ್ಮಿಕರು ಶ್ರಮ ವಹಿಸಿ ಕೆಲಸ ಮಾಡುತ್ತಿದ್ದಾರೆ. ಈ ಎಲ್ಲಾ ಗುತ್ತಿಗೆ, ಹೊರಗುತ್ತಿಗೆ, ಮುನ್ಸಿಪಲ್ ಕಾರ್ಮಿಕರು ಕಾಯಂಗೊಳಿಸುವ ನೇರ ಪಾವತಿ ಅಡಿಯಲ್ಲಿ ದುಡಿಯುತ್ತಿರುವ 24 ಸಾವಿರ ಪೌಕಾರ್ಮಿಕರ ಸೇವಗಳನ್ನ ಮಾತ್ರ ಕಾಯಂಗೊಳಿಸುವ ಪ್ರಕ್ರಿಯನ್ನು ನಡೆಸುತ್ತದೆ. ಇದನ್ನು ಮುನ್ಸಿಪಲ್ ಕಾರ್ಮಿಕರ ಸಂಘ ಸ್ವಾಗತಿಸುತ್ತದೆ. ಆದರೆ ಇತರ ಗುತ್ತಿಗೆ ಮುನ್ಸಿಪಲ್ ಕಾರ್ಮಿಕರ ಬಗ್ಗೆ ಯಾವುದೇ ಕ್ರಮ ವಹಿಸಿದೆ ಇರುವದು ನ್ಯಾಯ ಸಮ್ಮತವಲ್ಲ ಎಂದು ಅಭಿಪ್ರಾಯ ಪಟ್ಟಿದೆ. ರಾಜ್ಯ ಸರಕಾರವು ಮುನ್ಸಿಪಾಲಟಿಗಳಲ್ಲಿ ದುಡಿಯುವ ಎಲ್ಲಾ ಗುತ್ತಿಗೆ, ಹೊರಗುತ್ತಿಗೆ, ಆಧಾರಿತ ಪೌರಕಾರ್ಮಿಕರು, ಒಳ ಚಂರಡಿ ಸ್ವಚ್ಚತಾ ಕಾರ್ಮಿಕರು, ಲೋರ್ಸ್, ಕಸದ ವಾಹನ ಚಾಲಕರು, ಸಹಾಯಕರು, ಸ್ಯಾನಿಟರಿ ಸುಪರವೈಜ್‌ರಗಳು, ಪಾರ್ಕ, ಸ್ಮಶಾನ ಶೌಚಾಲಯಗಳಲ್ಲಿ, ಘನತಾಜ್ಯ ಘಟಕ, ಯು.ಜಿ.ಡಿ. ನೀರು ಸಂಸ್ಕರಣ ಘಟಕ, ಕಾರ್ಮಿಕರನ್ನ, ಮೇಲ್ವಚಾರಕರು ಎಂಬ ಅಸಬಂಧ ವಿಂಗಡಣೆಯನ್ನು ಕೈ ಬಿಟ್ಟು ಎಲ್ಲಾ ಸ್ವಚ್ಚತಾ ಕಾರ್ಮಿಕರನ್ನ ವಾಹನ ಚಾಲಕರ ಸೇವೆಗಳನ್ನ, ಈ ತಕ್ಷಣದಿಂದ ನೇರ ಪಾವತಿ ಅಡಿಯಲ್ಲಿ ತಂದು ಸಮಾನ ವೇತನ ನೀಡಬೇಕು. ನಂತರದಲ್ಲಿ ಹಂತ ಹಂತವಾಗಿ ಕಾಯಂಗೊಳಿಸಲು ಒತ್ತಾಯಿಸಿ ದಿನಾಂಕ:–26–09–2024 ರಂದು ಎಲ್ಲಾ ಗುತ್ತಿಗೆ ಮುನ್ಸಿಪಲ್ ಕಾರ್ಮಿಕರು ಒಟ್ಟಾಗಿ ಸಲ್ಲಿಸಿದ ಮನವಿ ಪತ್ರ. ಈ ಹಕ್ಕೊತಾಯಗಳ ಆಧಾರದಲ್ಲಿ ಸೆ.ರಂದು ಮುನ್ಸಿಪಲ್ ಕಾರ್ಮಿಕರು "ವಿಧಾನ ಸೌಧ ಚಲೋ" ನಡೆಸಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಪೌರಕಾರ್ಮಿಕ ಮುಖಂಡರಾದ ದಯಾನಂದ ಅಲಿಯಾಬಾದ ಮಾತನಾಡಿ, ಸುಪ್ರೀಂಕೋರ್ಟಿನ ತಿರ್ಮಾನದಂತೆ ಎಲ್ಲಾ ಕಾರ್ಮಿಕರಿಗೂ ಸಮಾನ ಕೆಲಸಕ್ಕೆ ಸಮಾನ ವೇತನ ಮತ್ತು ಸೌಲಭ್ಯ ನೀಡಬೇಕು. ಹತ್ತಾರು ವರ್ಷಗಳ ಕಾಲ ಸೇವೆ ಸಲ್ಲಿಸಿ ನಿವೃತಿ/ಮರಣ ಹೊಂದುವ ಮುನ್ಸಿಪಲ್ ಕಾರ್ಮಿಕರ ಅವಲಂಬಿತರಿಗೆ ಉಪಧನ ನೀಡುವ ಸಂಭಂದ ಸ್ಪಷ್ಟವಾದ ಆದೇಶ ಹೊರಡಿಸಬೇಕು. ಇದಕ್ಕೆ ವಿಳಂಬವಾದರೆ ಕಾರ್ಮಿಕರು ಬೀದಿಗಿಳಿದು ಹೋರಾಟ ಮಾಡಬೇಕಾಗುತ್ತದೆ. ಎಲ್ಲಾ ಗುತ್ತಿಗೆ ಮುನ್ಸಿಪಲ್ ಕಾರ್ಮಿಕರು ಅಲ್ಪವೇತನದಲ್ಲಿ ಬದುಕುತ್ತಿರುವ ಕಾರಣ ಎಲ್ಲರಿಗೂ ಸರಕಾರ ಗೃಹಭಾಗ್ಯ ಯೋಜನೆ ಅಡಿಯಲ್ಲಿ ಉಚಿತ ನಿವೇಶನಗಳ ನೀಡಬೇಕು. ನೇರ ಪಾವತಿ, ಗುತ್ತಿಗೆ, ದಿನಗೂಲಿ, ಸಮಾನ ವೇತನ ಆಧಾರದಲ್ಲಿ ದುಡಿಯುವ ಮುನ್ಸಿಪಲ್ ಕಾರ್ಮಿಕರು ಸೇವೆಯಲ್ಲಿರುವಾಗಲೆ ಮರಣ ಹೊಂದಿದರೆ ಆ ಕುಟುಂಬದ ಅವಲಂಬಿತರಿಗೆ ಕೆಲಸ ನೀಡಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮನೋಹರ ಚವ್ಹಾಣ, ರಘುನಾಥ ಪುಕಾಳೆ, ರವಿ ಲೋನಾರೆ, ಪೀರಪ್ಪ ಚಲವಾದಿ, ಅನೀಲ ಮೇಲಿನಮನಿ, ಧನಂಜಯ ನಿಂಬರಗಿ, ದಿಲೀಪ ರಣದೇವಿ, ಯಲ್ಲವ್ವ ಗೊಲ್ಲರ, ಅನೀಲ ತುಪಸುಂದರ, ಅಭಿಷೇಕ ಲೀಮಕರ, ಶಾಂತಾ ಗೊಲ್ಲರ, ಜಯಶ್ರೀ ಲಂಬು, ದಾನಪ್ಪ ಯಡಳ್ಳಿ ಮುಂತಾದವರು ಇದ್ದರು

### ಸಾಧಕ ವಿದ್ಯಾರ್ಥಿಗಳಿಗೆ ಏಕಲವ್ಯ ಸ್ಕೆಟಿಂಗ್ ಅಕಾಡಮಿ ವತಿಯಿಂದ ಗೌರವ ಸನ್ಮಾನ

# ಅನುಭವದಿಂದ ಯಶಸ್ಸಿನ ಹಾದಿ ಸುಲಭ : ಶಾರದಳ್ಳಿ

■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಕ್ರೀಡೆಗಳಲ್ಲಿ ಉತ್ಸಾಹದಿಂದ ಭಾಗವಹಿಸುವ ಛಲ ಇರುವವರು ಖಂಡಿತ ಯಶಸ್ಸು ಕಾಣಲು ಸಾಧ್ಯ ಎಂದು ಏಕಲವ್ಯ ಸ್ಕೆಟಿಂಗ್ ಅಕಾಡೆಮಿಯ ಸಂಸ್ಥಾಪಕ ಶಿವುಕುಮಾರ ಶಾರದಳ್ಳಿ ಹೇಳಿದರು.

ಪಟ್ಟಣದ ಅಂಬೇಡ್ಕರ್ ಭವನದ ಎದುರು ಅಕಾಡೆಮಿ ವತಿಯಿಂದ ಸಾಧಕ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಯಾವುದೇ ಕ್ರೀಡೆಯಾದರೂ ಸಾಕಷ್ಟು ಅನುಭವ ಪಡೆಯಬೇಕು. ಅನುಭವ ಹೆಚ್ಚಾದಂತೆ ಕ್ರೀಡೆಯಲ್ಲಿ ಗೆಲುವು ಸಾಧಿಸುವ ತಂತ್ರಗಳು ತಿಳಿಯುತ್ತವೆ. ಬಳಿಕ ಯಶಸ್ಸಿನ ಹಾದಿ ಸುಲಭವಾಗಿರುತ್ತದೆ. ಆದರೆ ಕ್ರೀಡೆ ಕಲಿತ ಬಳಿಕವೇ ಸ್ಪರ್ದೆಯಲ್ಲಿ ಪಾಲ್ಗೊಂಡು ಗೆಲ್ಲಲಿಲ್ಲ ಎಂದು ಕೊರಗಬಾರದು. ನಿರಂತರ ಶ್ರದ್ಧೆ ಹೊಂದಿರಬೇಕು ಎಂದರು.

ಕಾರ್ಯಕ್ರಮದಲ್ಲಿ ಚೆಸ್ ಆಟದಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆಯಾದ ಸ್ಪೂರ್ತಿ ಹರನಾಳ, ಭರತನಾಟ್ಯ ಸ್ಪರ್ದೆಯಲ್ಲಿ ಭಾಗಿಯಾಗಿದ್ದ ಸಿಂಧು ಅನ್ನಗೌನಿ ಮತ್ತು ರನ್ವಿತ ಅನ್ನಗೌನಿ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.



ಈ ವೇಳೆ ಸುನೀಲ ಹವಾಲ್ದಸಾರ, ಬಸವರಾಜ ನಾಗೂರ, ರುದ್ರು ಮುರಾಳ, ರಿಯಾಜ ನಾಯ್ಕೋಡಿ, ಗುರು ಡಮನಾಳ ಸೇರಿದಂತೆ ಮತ್ತೀತರರು ಇದ್ದರು.

# ಸುರಕ್ಷತಾ ನಿಯಮಗಳನ್ನು ಹೊಂದಿರದ ಶಾಲಾ ವಾಹನಗಳು

## ಮಕ್ಕಳ ಭವಿಷ್ಯದ ಜೊತೆ ಚೆಲ್ಲಾಟವಾಡುತ್ತಿರುವ ಖಾಸಗಿ ಶಾಲೆಗಳು!

■ ಉದಯರಶ್ಮಿ ದಿನಪತ್ರಿಕೆ


ನಾಯಿ ಕೊಡೆಯಂತೆ ಎಲ್ಲೆಂದರಲ್ಲಿ ತಲೆಯೆತ್ತುತ್ತಿರುವ ಖಾಸಗಿ ಶಾಲೆಗಳು ಮಕ್ಕಳ ಭವಿಷ್ಯದ ಜೊತೆ ಚೆಲ್ಲಾಟವಾಡುತ್ತಿವೆ. ಪೈಪೋಟಿಗೆ ಬಿದ್ದಂತೆ ಖಾಸಗಿ ಶಾಲೆಗಳಿಗೆ ಸರಕಾರ ಪರ್ಮಿಷನ್ ಕೊಡುತ್ತಿರುವುದು ಇದಕ್ಕೆಲ್ಲ ಕಾರಣವಾಗಿದೆ. ಪ್ರತಿಯೊಂದು ಹಳ್ಳಿಗೆ ಒಂದೋ ಎರಡೋ ಖಾಸಗಿ ಶಾಲೆಗಳಿವೆ. ಅವುಗಳಿಗೆ ಪರ್ಮಿಷನ್ ಕೊಡುವಲ್ಲಿ ಯಾವುದೇ ಸರ್ಕಾರಿ ನಿಯಮವನ್ನು ಅಧಿಕಾರಿಗಳು ಪರಿಗಣಿಸಿಲ್ಲ. ಅವರು ಶಾಲಾ ಆಡಳಿತ ಮಂಡಳಿಯ ವರಮಾನದ ಕಡೆ ಮಾತ್ರ ಗಮನಹರಿಸಿರುವುದು ಕಂಡುಬರುತ್ತದೆ.

2015ರಂದು ಜನವರಿ ತಿಂಗಳು ವಿಜಯಪುರ ಜಿಲ್ಲೆಯ ಸಿಂದಗಿ ತಾಲೂಕಿನ ಹೊನ್ನಳ್ಳಿ ಗ್ರಾಮದ ಖಾಸಗಿ ಶಾಲಾ ವಿದ್ಯಾರ್ಥಿನಿಯಾದ ರಿಯಾನ ಎಂಬ ವಿದ್ಯಾರ್ಥಿನಿಯು ಶಾಲೆಯನ್ನು ಮುಗಿಸಿಕೊಂಡು ಮೂರು ಚಕ್ರದ ಆಟೋದಲ್ಲಿ ಸುಮಾರು 20 ವಿದ್ಯಾರ್ಥಿನಿಯರನ್ನು ತುಂಬಿಕೊಂಡು ಹೊನ್ನಳ್ಳಿಯಿಂದ 9 ಕಿಲೋಮೀಟರ್ ದೂರ ಇರುವ ಅಸಂತಾಪುರ ಗ್ರಾಮಕ್ಕೆ ಹೊರಟಿತ್ತು. ಆಟೋದ ಚಾಲಕನು ಟೇಪ್ ರೆಕಾರ್ಡನ್ನು ಭಾರಿ ಸೌಂಡ್ ಇಟ್ಟುಕೊಂಡು ಓಡಿಸುತ್ತಿದ್ದ ಚಾಲಕನ ಅಜಾಗ್ರಕತೆಯ ಚಾಲನೆಯಿಂದಾಗಿ ತಿರುವಿನ ರಸ್ತೆಯಲ್ಲಿ ಆಟೋ ಪಲ್ಟಿಯಾಗಿ ರಿಯಾನ್ ಎಂಬ ಪ್ರತಿಭಾವಂತ ವಿದ್ಯಾರ್ಥಿಯು ಸ್ಥಳದಲ್ಲೇ ಸಾವು ಗೀಡಾದಳು ಹಲವು ವಿದ್ಯಾರ್ಥಿನಿಗಳು ಗಾಯಗೊಂಡರು ವಿಪರಾಸೆಯೆಂದರೆ ಇದು ಯಾವುದೇ ಪೊಲೀಸ್ ಸ್ಟೇಷನ್ ನಲ್ಲಿ ಕೇಸ್ ದಾಖಲಾಗಲಿಲ್ಲ ಉಳ್ಳವರ ಕೈಯಿಂದ ಆ ಪ್ರಕರಣವು ಮಾಯವಾಯಿತು ಮಗಳ ಸಾವಿನಿಂದ ಅವರ ತಾಯಿಯು ಮಾನಸಿಕ ಸ್ಥಿಮಿತವನ್ನು ಕಳೆದುಕೊಳ್ಳಬೇಕಾಯಿತು.

ಇಂತಹ ದುರ್ಘಟನೆಗಳು ಹಲವಾರು ನಡೆದರೂ ಖಾಸಗಿ ಶಾಲಾ ವಾಹನಗಳು ಹೆಗ್ಗಿಲ್ಲದೆ ಓಡಾಡುತ್ತಿರುವುದನ್ನು ನಾವು ನೋಡಬಹುದು ಯಾವ ಖಾಸಗಿ ಶಾಲೆಗಳು ಮಕ್ಕಳ ಸುರಕ್ಷತಾ ದೃಷ್ಟಿಯಿಂದ ಶಾಲಾ ವಾಹನಗಳಿಗೆ ರೂಪಿಸಿರುವ ಸುರಕ್ಷತಾ ಮಾರ್ಗಸೂಚಿಯು ರಾಜ್ಯದಲ್ಲಿ ಆಟಕ್ಕುಂಟು ಲೆಕ್ಕಕ್ಕಿಲ್ಲ ಎಂಬುವಂತಾಗಿದೆ. ಆನೆ ನಡೆದಿದ್ದೇ ದಾರಿ ಎಂಬುವಂತೆ ಖಾಸಗಿ ಶಿಕ್ಷಣ ಸಂಸ್ಥೆಗಳು ಮುಗ್ಧ ಮಕ್ಕಳ ಜೀವನದ ಜೊತೆ ಚೆಲ್ಲಾಟವಾಡುತ್ತಿವೆ.

ಖಾಸಗಿ ಶಿಕ್ಷಣ ಸಂಸ್ಥೆಗಳು ಶುಲ್ಕದ ಸೋಗಿನಲ್ಲಿ ಪಾಲಕರಿಂದ ಲಕ್ಷಾನುಗಟ್ಟಲೆ ಹಣ ವಸೂಲಿ ಮಾಡುತ್ತಿವೆ ಆದರೆ ಮಕ್ಕಳ ಸುರಕ್ಷತೆಯನ್ನು ನಿರ್ಲಕ್ಷಿಸುತ್ತಿವೆ ಅವುಗಳು ಬಳಸಬೇಕಾದಂತ ಸುರಕ್ಷತಾ ಮಾರ್ಗಸೂಚಿಯ ನಿಯಮಗಳನ್ನು ಗಾಳಿಗೆ ತೂರಿವೆ.

ಗ್ರಾಮೀಣ ಪ್ರದೇಶದಲ್ಲಿ ಅಂತೂ ಹೇಳುವವರಿಲ್ಲ







ಸಾಂದರ್ಭಿಕ ಚಿತ್ರ

ಕೇಳುವವರಿಲ್ಲದಂತ ಪರಿಸ್ಥಿತಿ ಮಕ್ಕಳನ್ನು ಕುರಿಗಳಂತೆ ವಾಹನದಲ್ಲಿ ತುಂಬಿಸಿ ಕರೆದ್ದೊಯ್ಯುತ್ತಾರೆ ಅನಾನುಭವಿ ಚಾಲಕನ ನೇಮಿಸಿಕೊಳ್ಳುವುದು ಮತ್ತು ಅತಿ ವೇಗದ ಚಾಲನೆ, ಶಾಲಾ ವಾಹನದ ಒಳ ವಿನ್ಯಾಸ ಬದಲಾಯಿಸುವುದು, ಹಳೆಯ ಸುಸ್ಥಿತಿಯಲ್ಲಿ ಇರದ ವಾಹನಗಳ ಬಳಕೆ ಸಾಮಾನ್ಯವಾಗಿವೆ.

ಪಾಲಕರು ಶಿಕ್ಷಣಕ್ಕೆ ಕೊಡುವಷ್ಟು ಪ್ರಾಮುಖ್ಯತೆ ಮಕ್ಕಳ ಸುರಕ್ಷತೆಗೆ ವಹಿಸದಿರುವುದು ದುರದೃಷ್ಟ ಎನ್ನಬಹುದು.

ಇತ್ತೀಚಿಗೆ ಗೋಕಾಕ್ ತಾಲೂಕಿನ ಮರಡಿಮಟ್ಟ ಗ್ರಾಮದ ಖಾಸಗಿ ಶಾಲೆಗೆ ಸೇರಿದ ಬಸ್ ಸ್ಟೇರಿಂಗ್ ರಾಡ ಮುರಿದು ಪಲ್ಟಿಯಾಗಿ ಅಲ್ಲಿ ದುರ್ಘಟನೆ ನಡೆಯಿತು ವಾಹನದಲ್ಲಿದ್ದ 17 ವಿದ್ಯಾರ್ಥಿಗಳು ಬಾರಿ ಗಾಯಗಳಾಗಿ ಆಸ್ಪತ್ರೆಗೆ ದಾಖಲಾಗಬೇಕಾಯಿತು.

ಉತ್ತರ ಕನ್ನಡದ ಸಿ ಬಿ ಎಸ್ ಈ ಖಾಸಗಿ ಶಾಲಾ ವಾಹನ ಪಲ್ಟಿಯಾಗಿ ಒಬ್ಬಳುವಿದ್ಯಾರ್ಥಿನಿಯು ಸಾವು ಗೇಡಾಗಿರುವುದು ಇನ್ನು ಮಾಸಿಲ್ಲ ಇಂತಹ ಹಲವಾರು ಘಟನೆಗಳು ರಾಜ್ಯದಲ್ಲಿ ನಡೆಯುತ್ತಿದೆ ಕೆಲವು ಮಾತ್ರ ಸಮಾಜದ ಗಮನಕ್ಕೆ ಬಂದರೆ ಸಾವಿರಾರು ಪ್ರಕರಣಗಳು ಖಾಸಗಿ ಶಾಲಾ ಸಂಸ್ಥೆಯವರು ಮತ್ತು ಅಧಿಕಾರಿಗಳ ಜೊತೆ ಶಾಮೀಲಾಗಿ ಮುಚ್ಚಿಹೋಗಿವೆ.

ಪ್ರತಿಷ್ಠಿತ ಶಾಲೆಗಳಲ್ಲಿ ಕಲಿಸುವ ಪಾಲಕರ ಹುಚ್ಚು ಮಧ್ಯಮ ವರ್ಗದ ಜನರು ಪೈಪೋಟಿಗೆ ಬಿದ್ದಂತೆ ಸಮೀಪದ ಸರ್ಕಾರಿ ಶಾಲೆಯನ್ನು ಬಿಟ್ಟು ದೂರದಲ್ಲಿರುವ ಖಾಸಗಿ ಶಾಲೆಗಳಿಗೆ ದಾಖಲಿಸುತ್ತಾರೆ ಮಧ್ಯಮ ವರ್ಗದವರ ಪ್ರತಿಷ್ಠತೆಯ ಶಿಕ್ಷಣದ ಭೂತದಿಂದ ಎಳೆಯ ಮಕ್ಕಳು ತಮ್ಮ ಭವಿಷ್ಯವನ್ನೇ ಪಾಲಕರು ಹಾಳು ಗೆಡುತ್ತಿರುವುದು ವಿಷಾದನೀಯ.

ಲಕ್ಷಾಂತರ ರೂಪಾಯಿ ಕೊಟ್ಟು ಖಾಸಗಿ ಶಾಲೆಗೆ ಸೇರಿಸುವ ಪಾಲಕರು ತಮ್ಮ ಮಕ್ಕಳು ಎಷ್ಟು ಸುರಕ್ಷಿತ ಎಂಬುವ ಕಾಳಜಿಯೇ ಇಲ್ಲ ಹಲವಾರು ಪ್ರತಿಷ್ಠಿತ ಶಾಲೆಗಳೆಲ್ಲ ಮಕ್ಕಳ ಬೌದ್ಧಿಕ ಬೆಳವಣಿಗೆಗೆ ನೀಡುವಷ್ಟು ಆದ್ಯತೆ ರಕ್ಷಣಾ ಸುರಕ್ಷತೆಗೆ ನೀಡುವ ವಿಚಾರದಲ್ಲಿಲ್ಲ

ಬಹುತೇಕ ಖಾಸಗಿ ಶಾಲಾ ವಾಹನಗಳು ಮತ್ತು ನಾಲ್ಕು ಚಕ್ರದ ಆಟೋಗಳು ಸುರಕ್ಷತಾ ನಿಯಮಗಳ ಬಗ್ಗೆ ಅರಿವೇ ಇಲ್ಲ ಪ್ರತಿನಿತ್ಯ ಶಾಲೆ ಆರಂಭವಾದ ನಂತರ ಮತ್ತು ಮುಕ್ತಾಯದ ಸಂದರ್ಭದಲ್ಲಿ ವಾಹನಗಳ ಕಂಡರೆ ಎಂತವರಿಗಾದರೂ ಇದು ಅರ್ಥವಾಗುತ್ತದೆ.

> ಲೇಖಕರು
> * ಸಾಯಬಣ್ಣ ಮಾದರ (ಸಲಾದಹಳ್ಳಿ )

ಖಾಸಗಿ ಶಾಲಾ ವಾಹನಗಳ ಅಪಘಾತಗಿಡಾಗಿರುವುದು ಅವುಗಳಿಂದಾಗಿರುವ ಕಹಿ ಘಟನೆಗಳನ್ನು ನಾವು ನೋಡಬಹುದು 2016ರ ಜೂನ್ 21ರಂದು ಉಡುಪಿ ಜಿಲ್ಲೆಯ ಕುಂದಾಪುರ ತಾಲೂಕಿನ ರಾಶಿಯಲ್ಲಿ ನಡೆದ ರಸ್ತೆ ಅಪಘಾತದಲ್ಲಿ ಒಂದೇ ಶಾಲೆಯ 8 ಮಕ್ಕಳು ಕೊನೆಯ ಉಸಿರು ಎಳೆದರು ನಾಲ್ಕೈದು ಮಕ್ಕಳು ತೀವ್ರ ಗಾಯಗಳಾಗಿದ್ದವು ಅದು ಓಮಿನಿ ಶಾಲಾ ವಾಹನವಾಗಿತ್ತು. ಅದೇ ತಿಂಗಳು ಹುಬ್ಬಳ್ಳಿಯಲ್ಲಿ ಶಾಲಾ ವಾಹನವ ಅಪಘಾತವಾಗಿ ವಿದ್ಯಾರ್ಥಿಗಳು ತೀವ್ರ ಗಾಯಗಳಾಗಿದ್ದು ನೋಡಿದ್ದೇವೆ.

ಏನು ಅರಿಯದ ಆ ವಿದ್ಯಾರ್ಥಿನಿಯ ಮುಂದಿನ ಭವಿಷ್ಯದ ಕನಸು ಹೊತ್ತು ಶಾಲೆಗೆ ಹೋದ ವಿದ್ಯಾರ್ಥಿನಿಯು ಮರಳಿ ಮನೆಗೆ ಬರಲಿಲ್ಲ ಈ ದುರ್ಘಟನೆಯೂ 2018ರಲ್ಲಿ ಶಿವಮೊಗ್ಗದಲ್ಲಿ ನಡೆದಿದ್ದು ಇನ್ನೂ ಹಸಿರಾಗಿದೆ. ಇಷ್ಟು ಮಾತ್ರವಲ್ಲದೆ ರಿಕ್ಷಾದಲ್ಲಿ ಅಥವಾ ಓಮಿನಿ ವಾಹನಗಳಲ್ಲಿ ಶಾಲಾ ಮಕ್ಕಳು ಹೋಗುತ್ತಿರುವಾಗ ಅಪಘಾತ ಕ್ಕಿಡಾಗಿ ಸಾವು ನೋವು ಸಂಭವಿಸಿರುವುದು ರಾಜ್ಯದಲ್ಲಿ ನಡೆದರೂ ಅವು ಬೆಳಕಿಗೆ ಬಂದಿಲ್ಲ.

ಖಅ 276 ೦ಕ ಅನ್ವಯ ಖಾಸಗಿ ಶಾಲಾ ವಾಹನಗಳ ನಿರ್ವಹಣೆ ಮಾರ್ಗಸೂಚಿಯು ಅಖಇ ೦ಕ ಶಾಲಾ ಮಕ್ಕಳ ಸುರಕ್ಷತೆ ಕುರಿತು ದಿನಾಂಕ 19 ಮೇ 2015ರಂದು ಕಖಔಅ ಖಅ ಓಔ 276/ಕಖ–1/2014ಅನು ಬಿಡುಗಡೆ ಮಾಡಿದೆ. ಇದರ ಅನ್ವಯ ಖಾಸಗಿ ಶಾಲೆಗಳ ಆಡಳಿತ ಮಂಡಳಿಗಳ ಅಡಿಯಲ್ಲಿ ಶಾಲಾ ಮಕ್ಕಳು ಸಾಗಿಸುವ ಶಾಲಾ ಬಸ್ಸುಗಳು ಮತ್ತು ವಾಹನಗಳು ರಾಜ್ಯದ ವಿವಿಧ ಭಾಗಗಳಲ್ಲಿ ಅಪಘಾತಗಳ ಸಂಭವಿಸಿದ್ದು ಈ ಘಟನೆಗಳು ಶಾಲಾ ಆಡಳಿತ ಮಂಡಳಿಯವರು ಬಸ್ಸುಗಳನ್ನು ಅಗತ್ಯ ಇರುವ ಮಟ್ಟಿಗೆ ನಿರ್ವಹಿಸುತ್ತಿಲ್ಲ ಎಂದು ದೃಢಪಡಿಸಿದೆ.

ಶಾಲಾ ಆಡಳಿತ ಮಂಡಳಿಯವರು ಶಾಲಾ ವಾಹನಗಳನ್ನು ವ್ಯಾಪಾರಿಕರಣದ ದೃಷ್ಟಿಯಿಂದ ನೋಡುತ್ತಿರುವುದು ಏನು ಗುಟ್ಟಾಗಿ ಉಳಿದಿಲ್ಲ. ಒಂದಡೆ ನಿಯಮ ಉಲ್ಲಂಘನೆಯಾದರೆ ಮತ್ತೊಂದೆಡೆ ಎಳೆಯ ಮಕ್ಕಳು ಇಕ್ಕಟ್ಟಿನಲ್ಲಿ ಉಸಿರು ಕಟ್ಟುವ ವಾತಾವರಣದಲ್ಲಿ ಪ್ರಯಾಣಿಸುವ ಸ್ಥಿತಿ ನಿರ್ಮಾಣವಾಗಿದೆ. ಇದು ಕಲ್ಯಾಣ ಕರ್ನಾಟಕ ಮತ್ತು ಕಿತ್ತೂರು ಕರ್ನಾಟಕ ಭಾಗದಲ್ಲಿ ಅತಿ ಹೆಚ್ಚು ಮಿತಿಮೀರಿದೆ ಎಂದು ಹೇಳಬಹುದು.

ಉತ್ತರ ಕರ್ನಾಟಕದ ಭಾಗದಲ್ಲಿ ಬೆಳಣಿಕೆಯಷ್ಟು ಶಾಲಾ ಬಸ್ಸುಗಳು ಕಾಣಬಹುದು. ಉಳಿದವು ಗೂಡ್ಸ್ ಗಾಡಿಗಳು, ಆಟೋಗಳಲ್ಲಿ ಮಕ್ಕಳನ್ನು ಶಾಲೆಗೆ ಕರೆದೊಯ್ಯುತ್ತಾರೆ. ಗ್ರಾಮೀಣ ಅನಕ್ಷರಸ್ಥ ಜನರು ಕಂಡೂ ಕುರುಡ ರಾಗಿದ್ದಾರೆ. ಗ್ರಾಮೀಣ ಭಾಗದಲ್ಲಿ ವಾಹನದ ಸೌಲಭ್ಯ ಇರುವುದಿಲ್ಲ. ಹೇಗೋ ಮಕ್ಕಳನ್ನು ಶಾಲೆಗೆ ಕಳಿಸಿದರೆ ಸಾಕಪ್ಪ ಎನ್ನುವುದು ಪೋಷಕರ ಧೋರಣೆ.

ಬೆಳ್ಳಗಿರುವುದೆಲ್ಲಾ ಹಾಲಲ್ಲ, ಕಾವಿ ತೊಟ್ಟವರೆಲ್ಲ ಸ್ವಾಮಿಗಳಲ್ಲ ಎನ್ನುವ ಹಾಗೆ ಹಳದಿ ಬಣ್ಣ ಬಳಿದುಕೊಂಡಿರುವ ವಾಹನಗಳೆಲ್ಲ ಶಾಲಾ ವಾಹನಗಳಲ್ಲ. ರಾಜ್ಯದ ಬಹುತೇಕ ಶಾಲಾ ವಾಹನಗಳು ಹಳದಿ ಬಣ್ಣ ಒಂದನ್ನು ಬಿಟ್ಟು ಮತ್ಯಾವುದೂ ನಿಯಮಗಳನ್ನು ಪಾಲಿಸುತ್ತಿಲ್ಲ. ಇದು ಶಾಲಾ ಸಂಸ್ಥೆಗಳ ನಿಜ ಬಣ್ಣ ತೋರಿಸುತ್ತದೆ.

ಶಾಲಾ ಮಕ್ಕಳ ರಸ್ತೆ ಸುರಕ್ಷತೆಯ ಬಗ್ಗೆ ವಿಶ್ವ ಆರೋಗ್ಯ ಸಂಸ್ಥೆ(ಘಾಊಔ) ಹೇಳುವಂತೆ 5 ರಿಂದ 19 ವರ್ಷದ ವಯಸ್ಸಿನ ಮಕ್ಕಳು ಮತ್ತು ಯುವಕರಲ್ಲಿ ಮರಣದ ಪ್ರಾಥಮಿಕ ಕಾರಣವೇನೆಂದರೆ ರಸ್ತೆ ಸಂಚಾರ ಘಟನೆಗಳು. ಮಕ್ಕಳು ತಮ್ಮ ಸೀಮಿತ ದೈಹಿಕ ಅರಿವಿನ ಮತ್ತು ಸಾಮಾಜಿಕ ಬೆಳವಣಿಗೆಯಿಂದಾಗಿ ದುರ್ಬಲ ರಸ್ತೆ ಬಳಕೆದಾರರ ಸಾಲಿಗೆ ಸೇರುತ್ತಾರೆ. ರಸ್ತೆ ಅಪಘಾತದಲ್ಲಿ ವಯಸ್ಕರಿಗೆ ಹೋಲಿಸಿದರೆ ಮಕ್ಕಳಿಗೆ ತೀವ್ರ ಅಪಾಯಗಳಾಗುವುದು ಹೆಚ್ಚು. ಏಕೆಂದರೆ ಮಕ್ಕಳ ದೇಹವು ಇನ್ನೂ ಬೆಳವಣಿಗೆ ಹಂತದಲ್ಲಿ ಇರುತ್ತದೆ. ಚಿಕ್ಕ ಮಕ್ಕಳಿಗೆ ತಲೆ, ಕುತ್ತಿಗೆ, ತಲೆ ಬುರುಡೆ ತೆಳ್ಳಗಿರುತ್ತದೆ. ಇದು ಮೆದುಳಿಗೆ ಕಡಿಮೆ ರಕ್ಷಣೆ ನೀಡುತ್ತದೆ. ಆದ್ದರಿಂದ ಖಾಸಗಿ ಶಾಲಾ ವಾಹನಗಳಲ್ಲಿ ಮಕ್ಕಳು ಅಸುರಕ್ಷತೆಯನ್ನು ಹೊಂದಿದ್ದಾರೆ ಎಂದು ಹೇಳಿದೆ.

ಕರ್ನಾಟಕ ಸರ್ಕಾರ ಶಾಲಾ ವಾಹನಗಳಿಗೆ ಹೊಸ ನಿಯಮಗಳನ್ನು ಜಾರಿಗೆ ತಂದಿದೆ. ಈ ನಿಯಮವು ಶಾಲಾ ವಾಹನಗಳಿಗೆ ಅಷ್ಟೇ ಅಲ್ಲ ಮಕ್ಕಳನ್ನು ಸಾಗಿಸುವ ಎಲ್ಲಾ ವಾಹನಗಳಿಗೆ ಅನ್ವಯವಾಗುತ್ತದೆ.


ಇದು 15 ಜೂನ್ 2024 ರಂದು ಹೊಸ ನಿಯಮ ಹೊರಡಿಸಿದ್ದು ಅದನ್ನು ತಕ್ಷಣ ವಾಹನ ಮಾಲೀಕರು ಅಳವಡಿಸಿಕೊಳ್ಳಬೇಕು ಎಂದು ಸುತ್ತೋಲೆ ಹೊರಡಿಸಿದೆ.

ಹೊಸ ನಿಯಮದ ಪ್ರಕಾರ ಶಾಲಾ ವಾಹನಗಳು ರಿಜಿಸ್ಟ್ರೇಷನ್ ಮಾಡಿಸಿಕೊಳ್ಳಬೇಕು. ಮೋಟಾರ್ ವಾಹನ ಕಾಯಿದೆ 1988ರ ಸೆಕ್ಷನ್ 96 (2) ಮತ್ತು212 ರ ಅಧಿಕಾರದ ಅಡಿಯಲ್ಲಿ ಶಾಲಾ ಮಕ್ಕಳ ಸುರಕ್ಷತೆಯ ಹೆಚ್ಚಿಸುವ ದೃಷ್ಟಿಯಿಂದ ಈ ತಿದ್ದುಪಡಿ ಮಾಡಲಾಗಿದೆ.

**ಶಾಲಾ ವಾಹನಗಳು ಪಾಲಿಸಬೇಕಾದಂತ ನಿಯಮಗಳು**

* ಗಂಟೆಗೆ 40 ಕಿಲೋ ಮೀಟರ್ ವೇಗದಲ್ಲಿ ಮಾತ್ರ ಚಲಿಸಬೇಕು
* ಶಾಲಾ ವಾಹನವು 15 ವರ್ಷದಷ್ಟು ಹಳೆದಿರಬಾರದು
* ವಾಹನದಲ್ಲಿ ಕಡ್ಡಾಯವಾಗಿ ಸಿಸಿ ಕ್ಯಾಮೆರಾ ಅಳವಡಿಸಬೇಕು
* ಶಾಲಾ ವಾಹನಗಳು ಮತ್ತು ಬಸ್ಸುಗಳು ಹಳದಿ ಬಣ್ಣದಿಂದ ಕೂಡಿದ್ದು ಬಸ್ಸಿನ ಎರಡು ಬದಿಯಲ್ಲಿಯು ಶಾಲೆಯ ಹೆಸರು ಸ್ಪಷ್ಟವಾಗಿ ಬರೆದಿರಬೇಕು
* ಶಾಲಾ ವಾಹನದ ಹಿಂಭಾಗ ಮುಂಭಾಗಲ್ಲಿ ಶಾಲಾ ವಾಹನ ಎಂದು ಬರೆದು ದೂರವಾಣಿ ಸಂಖ್ಯೆಯನ್ನು ಸ್ಪಷ್ಟವಾಗಿ ಬರೆದಿರಬೇಕು
* ವಾಹನದಲ್ಲಿ ತೆರೆದ ಕಿಟಕಿ ಇರಬಾರದು ಅಡ್ಡಲವಾಗಿ ಸರಳಗಳನ್ನು ಅಳವಡಿಸಿರಬೇಕು
* ತುರ್ತು ನಿರ್ಗಮನಾದ ದ್ವಾರ ಇರಬೇಕು
* ಶಾಲಾ ವಾಹನದ ಚಾಲಕನನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಪೋಲಿಸ್ ಪರಿಶೀಲನೆ ಆಗಿರಬೇಕು ಬಸ್ಸಿನಲ್ಲಿ ಮಕ್ಕಳನ್ನು ನೋಡಿಕೊಳ್ಳಲು ಸೂಕ್ತ ತರಬೇತಿ ಹೊಂದಿರುವ ಶಾಲಾ ಮಹಿಳಾ ಸಿಬ್ಬಂದಿ ಇರಬೇಕು
* ಶಾಲಾ ವಾಹನದಲ್ಲಿ ಸೀಟಗಿಂತ ಹೆಚ್ಚಿನ ಮಕ್ಕಳನ್ನು ಕರೆದೊಯ್ಯುವಂತಿಲ್ಲ
* ವಾಹನದಲ್ಲಿ ಎಲ್‌ಪಿಜಿ ಸಿಲಿಂಡರ್ ಇದ್ದಲ್ಲಿ ನೋಂದಣಿ ಸಂಖ್ಯೆ ಹಾಗೂ ಪ್ರಥಮ ಚಿಕಿತ್ಸೆ ಪೆಟ್ಟಿಗೆ ಕಡ್ಡಾಯವಾಗಿರಬೇಕು
* ಸಿಲಿಂಡರ್ ಮೇಲೆ ಸೀಟು ಅಳವಡಿಸುವಂತಿಲ್ಲ
* ಶಾಲಾ ವಾಹನದ ಚಾಲಕನಿಗೆ ತಿಳಿ ನೀಲಿ ಬಣ್ಣದ ಅಂಗಿ. ಕೋರ್ಟು, ಕಪ್ಪು ಬಣ್ಣದ ಬೂಟು ಧರಿಸಿರಬೇಕು ಶರ್ಟಿನ ಮೇಲೆ ಬಲಭಾಗದಲ್ಲಿ ಚಾ ಲಕನ ಹೆಸರಿನ ಬ್ಯಾಡ್ಜ್ ಹಾಕಿಕೊಂಡಿರಬೇಕು
* ಆಟೋದಲ್ಲಿ ಆರು ಮಕ್ಕಳಿಗಿಂತ ಹೆಚ್ಚಿಗೆ ಕರೆದೊಯ್ಯುವಂತಿಲ್ಲ
* ಮಕ್ಕಳ ಬ್ಯಾಗನ್ನು ಆಟೋ ಕನ್ನಡಿಗೆ ನೇತು ಹಾಕುವಂತಿಲ್ಲ

ಇಂಥ ಅನೇಕ ನಿಯಮಗಳನ್ನು ಸರ್ಕಾರ ಹೊರಡಿಸಿದರೂ ಖಾಸಗಿ ಶಾಲೆಗಳಿಗೆ ಬೆಕ್ಕಿನ ಕೊರಳಿಗೆ ಗಂಟೆ ಕಟ್ಟುವವರು ಯಾರು ಎಂಬುವಂತ ಪರಿಸ್ಥಿತಿ ಸರ್ಕಾರದ್ದಾಗಿದೆ. ಸರಕಾರ ರೂಪಿಸಿದ ಸುರಕ್ಷತಾ ಕ್ರಮಗಳ ನಿಯಮಗಳು ಅವು ಕೇವ್ಲಲ್ ಕಾಗದ ಮೇಲೆ ಉಳಿದಿವೆ. ಕಣ್ಣೆದುರೇ ಉಲ್ಲಂಘನೆ ಮಾಡುತ್ತಿದ್ದರೂ ಆರ ಟಿ ಓ, ಹಾಗೂ ಪೊಲೀಸ್ ಇಲಾಖೆ ಮೌನ ವಹಿಸಿವೆ. ಸರ್ಕಾರದಲ್ಲಿ ಬೇರೆ ಯಾವ ನಿಯಮಗಳು ಜಾರಿಗೆ ಆಗಲಿ, ಇಲ್ಲ ಕಾಗದ ಮೇಲೆ ಉಳಿಯಲಿ, ಆದರೆ ಇಂದಿನ ಮಕ್ಕಳು ನಾಳಿನ ಭವಿಷ್ಯದ ಪ್ರಜೆಗಳು. ಆದಕಾರಣ ಸರ್ಕಾರವು ಕಟ್ಟುನಿಟ್ಟಾಗಿ ನಿಯಮಗಳನ್ನು ಪಾಲಿಸಬೇಕೆಂಬುದು ಪ್ರಜ್ಞಾವಂತ ನಾಗರೀಕರ ಒತ್ತಾಯವಾಗಿದೆ.



# ಕ್ರೀಡೆಯಿಂದ ತಾಳ್ಮೆ ಹಾಗೂ ಆತ್ಮವಿಶ್ವಾಸ ವೃದ್ಧಿ : ಭಜಂತ್ರಿ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕ್ರೀಡೆಯಲ್ಲಿ ನಮ್ಮನ್ನು ನಾವು ತೊಡಗಿಸಿಕೊಳ್ಳುವುದರಿಂದ ತಾಳ್ಮೆ ಹಾಗೂ ಆತ್ಮವಿಶ್ವಾಸ ವೃದ್ಧಿಯಾಗಿ ಸುಂದರ ವ್ಯಕ್ತಿತ್ವದ ಬದುಕು ನಮ್ಮದಾಗುತ್ತದೆ ಎಂದು ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರಾದ ಮಲ್ಲಿಕಾರ್ಜುನ ಭಜಂತ್ರಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ಕ್ರೀಡಾ ಪ್ರಾಧಿಕಾರ ಇವರ ಸಹಯೋಗದಲ್ಲಿ ನಗರದ ಡಾ.ಬಿ.ಆರ್ ಅಂಬೇಡ್ಕರ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಜನೆಯೊಂದಿಗೆ ಆಟೋಟಗಳಲ್ಲಿ ಭಾಗವಹಿಸುವುದರಿಂದ ಮಾನಸಿಕ ಒತ್ತಡ ಕಡಿಮೆಯಾಗಿ ಚೈತನ್ಯಶಾಲಿಗಳಾಗಿ ಸದಾ ಚಟುವಟಿಕೆಯಿಂದಿರಲು ಸಹಾಯಕವಾಗುತ್ತದೆ ಎಂದು ಹೇಳಿದರು. ಆರೋಗ್ಯ ಸಂಪತ್ತು ನಮ್ಮೆಲ್ಲರ ಸಂಪತ್ತು. ಆರೋಗ್ಯವೇ ಭಾಗ್ಯ ಎಂಬ ನಾಣ್ಣುಡಿಯಂತೆ ಕ್ರೀಡೆಗಳಲ್ಲಿ ಭಾಗವಹಿಸಿ ದೈಹಿಕ ಹಾಗೂ ಮಾನಸಿಕ ಸಧೃಡತೆ ಹೊಂದಿ ದೈಹಿಕ ಆರೋಗ್ಯವಾಗಿರಬೇಕು ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ರಾಜಶೇಖರ ದೈವಾಡಿ, ನ್ಯಾಯವಾದಿ ನಾಗರಾಜ ಲಂಬು, ಅಡಿವೆಪ್ಪ ಸಾಲಗಲ್ ತರಬೇತುದಾರರಾದ ರಾಜು ಚವ್ಹಾಣ, ರಫಿಕ್ ನಧಾಪ್, ಸಲ್ಲಾವುದ್ದೀನ್ ಮಳಗಿ, ಶಿವು ಅಮರಪ್ಪಗೋಳ, ಬಸವರಾಜ ಬೆಳ್ಳುಬ್ಬಿ, ಶಂಕರ ಸನಾಫ, ವಾಯ್.ಬಿ. ಜಂಪಲೆ, ಚಂದ್ರಶೇಖರ ವಾಲೀಕಾರ, ಶಾಲಾ ಶಿಕ್ಷಣ ಇಲಾಖೆಯ ಎಂ.ಆರ್. ಮಕಾನದಾರ, ಸಂತೋಷ ಶೇಠೆ, ಆರ್.ಕೆ. ದೇಶಪಾಂಡೆ, ಎ.ಎಚ್. ಸಗರ, ಅಲಿ ದಡೇದ, ಶ್ರೀದತ್ತ ಜೋಷಿ, ಸಂಗನಗೌಡ ಕಡಕಲ್ ಹಾಗೂ ಮಮದಾಪುರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಅ.4ರಂದು ಉದ್ಯೋಗಮೇಳ ಆಯೋಜನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ದರಬಾರ ಸಂಸ್ಥೆಯ ಶ್ರೀಮತಿ ಕುಮುದಬೇನ ದರಬಾರ ಬಿಬಿಎ ಮತ್ತು ಬಿಸಿಎ ಕಾಲೇಜು, ಡಿ.ಕೆ.ಎಸ್ ಎಜುಕೇಷನ್ ಟ್ರಸ್ಟ್ ಇವುಗಳ ಸಹಯೋಗದಲ್ಲಿ ನಗರದ ಜೆ.ಎಂ ರಸ್ತೆಯಲ್ಲಿರುವ ಶ್ರೀಮತಿ ಕುಮುದಬೇನ ದರಬಾರ ಬಿಬಿಎ ಮತ್ತು ಬಿಸಿಎ ಕಾಲೇಜು ಆವರಣದಲ್ಲಿ ಅಕ್ಟೋಬರ್ 4ರಂದು ಉದ್ಯೋಗಮೇಳ ಆಯೋಜಿಸಲಾಗಿದೆ.

ವಿವಿಧ ಎಂಎನ್‌ಸಿ ಕಂಪನಿಗಳು ಹಾಗೂ ಸ್ಥಳೀಯ ಖಾಸಗಿ ಕಂಪನಿಗಳ ವಿವಿಧ ಹುದ್ದೆಗಳಿಗಾಗಿ ನೇಮಕಾತಿ ನಡೆಯಲಿದೆ. ಆಸಕ್ತರು ತಮ್ಮ ಶಾಲಾ ದಾಖಲಾತಿಗಳ ಸಹಿತ ಕನಿಷ್ಠ 5 ಸೆಟ್ ಬಯೋಡೇಟಾ ಮತ್ತು ಆಧಾರ ಕಾರ್ಡನೊಂದಿಗೆ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಕಚೇರಿಗೆ ಖುದ್ದಾಗಿ ಅಥವಾ ಪೋನ್ ಮೂಲಕ(ಮೊ.9480310837, 9945000793) ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

## ಆಯ್ಕೆ

ಆಳಂದ: ತಾಲೂಕಿನ ಸಾವಳೇಶ್ವರ ಸರ್ಕಾರಿ ಮಾದರಿಯ ಪ್ರಾಥ–ಮಿಕ ಶಾಲೆಯ ವಿದ್ಯಾರ್ಥಿಗಳು ಜಿಲ್ಲಾಮಟ್ಟದಲ್ಲಿ ಶಿಕ್ಷಣ ಇಲಾಖೆ ನಡೆಸಿ ಥ್ರೋಬಾಲ್ ಕ್ರೀಡೆಯಲ್ಲಿ ಪ್ರಥ–ಮ ಸ್ಥಾನ ಪಡೆದು ವಿಭಾಗಮಟ್ಟಕ್ಕೆ ಆಯ್ಕೆಯಾಗಿದ್ದಾರೆ ಎಂದು ದೈಹಿಕ ಶಿಕ್ಷಕ ಮಹಾದೇವ ಗುಣಕಿ ಅವರು ಹೇಳಿಕೊಂಡಿದ್ದಾರೆ. ಈ ಕುರಿತು ಹೆಚ್ಚಿನ ಪ್ರತಿಕ್ರಿಯೆ ನೀಡಿದ ಅವರು, ಇದೇ ವರ್ಷ ಸಾವಳೇಶ್ವರ ಸರ್ಕಾರಿ ಮಾದರಿಯ ಶಾಲೆಯ ನನ್ನ ವಿದ್ಯಾರ್ಥಿಗಳು ವಿಭಾಗ ಮಟ್ಟಕ್ಕೆ ಆಯ್ಕೆಯಾಗಿದ್ದು ತುಂಬಾ ಖುಷಿ ತಂದುಕೊಟ್ಟಿದೆ ಎಂದಿದ್ದಾರೆ.

## ಅ.5ರಂದು ಹೋಬಳಿ ಮಟ್ಟದ 14 ಗ್ರಾಮಗಳಲ್ಲಿ ಪಿಂಚಣಿ ಅದಾಲತ್

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಪಿಂಚಣಿದಾರರ ಅಹವಾಲು ಆಲಿಸಲು ಹಾಗೂ ಅರ್ಹರಿಗೆ ಪಿಂಚಣಿ ಮಂಜೂರು ಮಾಡುವ ಕುರಿತ ಸಾಮಾಜಿಕ ಭದ್ರತಾ ಯೋಜನೆಯಡಿಯ ಜಿಲ್ಲೆಯ 14 ಗ್ರಾಮಗಳಲ್ಲಿ ಅಕ್ಟೋಬರ್ 05 ರಂದು ಹೋಬಳಿ ಮಟ್ಟದ ಪಿಂಚಣಿ ಅದಾಲತ್ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ತಿಳಿಸಿದ್ದಾರೆ.

ಅಕ್ಟೋಬರ್ 05ರ ಬೆಳಿಗ್ಗೆ 11 ಗಂಟೆಗೆ ಮುದ್ದೇಬಿಹಾಳ ತಾಲೂಕಿನ ಸರೂರ ಗ್ರಾಮದ ಶ್ರೀ ರೇವಣಸಿದ್ದೇಶ್ವರ ದೇವಸ್ಥಾನದಲ್ಲಿ ವಿಜಯಪುರದ ಉಪ ವಿಭಾಗಾಧಿಕಾರಿಗಳು ಮತ್ತು ದೇವರ ಹಿಪ್ಪರಗಿ ತಾಲೂಕಿನ ಚಿಕ್ಕರೂಗಿ ಗ್ರಾಮದ ಶ್ರೀ ಹನುಮಾನ ಮಂದಿರದಲ್ಲಿ, ಇಂಡಿ ಉಪ ವಿಭಾಗಾಧಿಕಾರಿಗಳು ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ವಿಜಯಪುರ ಗ್ರೇಡ್–2 ತಹಶೀಲ್ದಾರ ಅವರು ಡೋಮನಾಳ ಗ್ರಾಮದ ಗ್ರಾಮ ಚಾವಡಿಯಲ್ಲಿ, ತಿಕೋಟಾ ಗ್ರೇಡ್–2 ತಹಶೀಲ್ದಾರ ಅವರು ಮಲಕನದೇವರಹಟ್ಟಿ ಗ್ರಾಮದ ಶ್ರೀ ಮಲ್ಲಿಕಾರ್ಜುನ ದೇವಸ್ಥಾನದಲ್ಲಿ, ಬಬಲೇಶ್ವರದ ಗ್ರೇಡ–2 ತಹಶೀಲ್ದಾರ ಅವರು ತಾಜಪೂರ ಪಿ.ಎಂ. ಗ್ರಾಮದ ಸರ್ಕಾರಿ ಗಂಡು ಮಕ್ಕಳ ಶಾಲೆಯಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ಬಸವನ ಬಾಗೇವಾಡಿ ಗ್ರೇಡ್–2 ತಹಶೀಲ್ದಾರ ಅವರು, ಮನಗೂಳಿ ಗ್ರಾಮದ ಗ್ರಾಮ ಚಾವಡಿಯಲ್ಲಿ, ತಹಶೀಲ್ದಾರ್ ಗ್ರೇಡ್–1 ಅವರು ಚಿಕ್ಕಾ ಆಸಂಗಿಯ ಸಮುದಾಯ ಭವನದಲ್ಲಿ ಹಾಗೂ ನಿಡಗುಂದಿ ಗ್ರೇಡ್–2 ತಹಶೀಲ್ದಾರ ಅವರು ಗೊಳಸಂಗಿ ಗ್ರಾಮದ ವಿಠ್ಠಲ ಮಂದಿರದಲ್ಲಿ ಪಿಂಚಣಿ ಅದಾಲತ್ ನಡೆಸುವರು.

ಮುದ್ದೇಬಿಹಾಳ ಗ್ರೇಡ್–2 ತಹಶೀಲ್ದಾರ ಅವರು, ಅಮರಗೋಳ ಗ್ರಾಮದ ದೇವಪ್ಪ ಮುತ್ಯಾನ ಮಠದಲ್ಲಿ, ತಾಳಿಕೋಟೆ ತಹಶೀಲ್ದಾರ ಅವರು ರಾಂಪೂರ ಪಿ.ಟಿ ಗ್ರಾಮದ ಮಾರುತಿ ದೇವಸ್ಥಾನದಲ್ಲಿ, ಇಂಡಿ ತಹಶೀಲ್ದಾರ್ ಗ್ರೇಡ್–2 ಅವರು ಬನ್ನಿಹಟ್ಟಿ ಗ್ರಾಮದ ಹನುಮಾನ ದೇವಸ್ಥಾನದ ಆವರಣದಲ್ಲಿ, ಚಡಚಣ ಗ್ರೇಡ್–2 ತಹಶೀಲ್ದಾರ ಅವರು ಗೋವಿಂದಪೂರ ಗ್ರಾಮದ ಲಕ್ಕಮ್ಮದೇವ ದೇವಸ್ಥಾನದಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ಸಿಂದಗಿ ಗ್ರೇಡ್–2 ತಹಶೀಲ್ದಾರ ಅವರು ಮಾಡಬಾಳ ಗ್ರಾಮದ ಕನ್ನಡ ಗಂಡು ಮಕ್ಕಳ ಶಾಲೆಯಲ್ಲಿ, ಹಾಗೂ ಆಲಮೇಲ ತಹಶಿಲ್ದಾರ ಅವರು ಬಗಲೂರು ಗ್ರಾಮದ ಗ್ರಾಮ ಪಂಚಾಯತಿಯಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ಪಿಂಚಣಿ ಅದಾಲತ್ ನಡೆಯುವ ಗ್ರಾಮಗಳಲ್ಲಿ ಸಾಮಾಜಿಕ ಭದ್ರತೆ ಪಿಂಚಣಿ ಫಲಾನುಭವಿಗಳಿಗೆ ಎನ್.ಪಿ.ಸಿ.ಐ. ಮ್ಯಾಪಿಂಗ್ ಕಾರ್ಯವನ್ನು ಸಂಬಂಧಿಸಿದ ಬ್ಯಾಂಕ್, ಅಂಚೆ ಅಧಿಕಾರಿಗಳ ಸಹಯೋಗದೊಂದಿಗೆ ತಪ್ಪದೇ ಮಾಡಿಸುವಂತೆಯೂ ಹಾಗೂ ಪಿಂಚಣಿ ಅದಾಲತ್‌ನಲ್ಲಿ ಪಿಂಚಣಿದಾರರ ಮಾಹಿತಿಯೊಂದಿಗೆ ಎಲ್ಲಾ ಗ್ರಾಮಗಳ ಗ್ರಾಮ ಲೆಕ್ಕಿಗರು, ಪಂಚಾಯತ್ ಕಾರ್ಯದರ್ಶಿಗಳು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಅಂಚೆ ಕಚೇರಿ ಸಿಬ್ಬಂದಿಗಳು ಕಡ್ಡಾಯವಾಗಿ ಹಾಜ–ರಿರುವಂತೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳ

## ವರ್ಗಾವಣೆಗೊಂಡ ಪ್ರಾಧ್ಯಾಪಕರೀರ್ವರ ಸೇವೆ ಅನನ್ಯ: ಚಾವಲ್ಕರ್



■ ಉದಯರಶ್ಮಿ ದಿನಪತ್ರಿಕೆ

ಕೆಂಭಾವಿ: ಪಟ್ಟಣದ ಶ್ರೀಮತಿ ಗಂಗೂಬಾಯಿ ಶಾಂತಗೌಡ ಪೋಲೀಸ್ ಪಾಟೀಲ್ ಮೆಮೋರಿಯಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸುದೀಪ್ ಸೇವೆ ಸಲ್ಲಿಸಿ ವರ್ಗಾವಣೆಗೊಂಡ ಪ್ರಾಧ್ಯಾಪಕಿ ಡಾ ನಂದಾ ವಾರದ, ಹಾಗೂ ಪ್ರಾಧ್ಯಾಪಕ ಗುಲಾಂ ಮೈಹಿಬೂಬಸಾಬ್ ಇವರುಗಳಿಗೆ ಕಾಲೇಜಿನ ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಗುರುವಾರ ಸನ್ಮಾನಿಸಿ ಗೌರವಿಸಿ ಶುಭಹಾರೈಸಿ

ಬೀಳ್ಕೊಡಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಈರ್ವರೂ ತಮ್ಮ ಸೇವಾವಧಿಯಲ್ಲಿ ಸಹಕಾರ ನೀಡಿದ ಸ್ಥಳೀಯರಿಗೂ ಹಾಗೂ ಸಿಬ್ಬಂದಿ ವರ್ಗಕ್ಕೂ ಕೃತಜ್ಞತೆ ಸಲ್ಲಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಂಶುಪಾಲ ಡಾ ನಾಗಪ್ಪ ಚಾವಲ್ಕರ್ 14 ವರ್ಷ ಸೇವೆ ಸಲ್ಲಿಸಿದ ಡಾ ನಂದಾ ವಾರದ ಹಾಗೂ 7 ವರ್ಷ ಸೇವೆ ಸಲ್ಲಿಸಿದ ಗುಲಾಂ ಮೈಹಿಬೂಬಸಾಬ್ ಈರ್ವರ ಸೇವೆ ಅನನ್ಯ ಎಂದು ಗುಣಗಾನ ಮಾಡಿದರು.

ಡಾ ಸಿದ್ದಲಿಂಗ ರಾಠೋಡ್, ಡಾ ಬಸಮ್ಮ ಎಸ್, ನಸ್ರೀನ್ ತಾಜ್, ಡಾ ಪೂಜ್ಯಾ ಹೊನ್ನುಟಗಿ, ಡಾ ಯಂಕನಗೌಡ ಪಾಟೀಲ, ಶರಣಪ್ಪ ಗೊಡ್ರಿಹಾಳ, ಸಂದೀಪ್ ಸಂಶಿಕರ್, ಸಂಗಪ್ಪ ಪಟ್ಟಣಕರ್, ಮಾಸುಮ ಅಲಿ ನಾಶಿ, ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಸಿಎಂ ಸಿದ್ಧರಾಮಯ್ಯ, ಪ್ರಭಾಕರ್ ಅವರಿಗೆ ಕೆಯುಡಬ್ಲ್ಯೂಜೆ ಅಭಿನಂದನೆ

# ಗ್ರಾಮೀಣ ಪತ್ರಕರ್ತರ ಉಚಿತ ಬಸ್ ಪಾಸ್ ಜಾರಿ, ನನಸಾದ ಕನಸು

■ ಉದಯರಶ್ಮಿ ದಿನಪತ್ರಿಕೆ



ಬೆಂಗಳೂರು: ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಕೊಡಬೇಕು ಎನ್ನುವುದು ಮೂರು ದಶಕಗಳ ಹೋರಾಟ. ಈ ಹೋರಾಟಕ್ಕೆ ಮನ್ನಣೆ ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ಸರ್ಕಾರ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡುವ ಆದೇಶವನ್ನು ಹೊರಡಿಸಿದ್ದು, ಅದಕ್ಕಾಗಿ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘವು ಅಭಿನಂದಿಸುತ್ತದೆ.

ದಾವಣಗೆರೆಯಲ್ಲಿ ನಡೆದ 38ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಭಾಗವಹಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ)ದ ಹಕ್ಕೋತ್ತಾಯ ಪರಿಗಣಿಸಿ, ಬಜೆಟ್‌ನಲ್ಲಿಯೇ ಉಚಿತ ಬಸ್ ಪಾಸ್ ಘೋಷಣೆ ಮಾಡುವುದಾಗಿ ಭರವಸೆ ನೀಡಿದ್ದರು. ಅಂತೆಯೇ ಬಜೆಟ್‌ನಲ್ಲಿಯೂ ಘೋಷಣೆ ಮಾಡಿದ್ದರು. ಈಗ ಉಚಿತ ಬಸ್ ಪಾಸ್ ಸೌಲಭ್ಯ ನನಸಾಗುವಂತೆ ಮಾಡಿರುವುದು ಶ್ಲಾಘನೀಯ ಎಂದು ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಪ್ರತಿಕ್ರಿಯಿಸಿದ್ದಾರೆ.

ಉಚಿತ ಬಸ್ ಪಾಸ್‌ಗೆ 15.66 ಕೋಟಿ ರೂ ಹಣವನ್ನು ಮೀಸಲಿರಿಸಿ ಯೋಜನೆಗೆ ಅನುಮತಿ ಪಡೆಯಲು ವಾರ್ತಾ ಇಲಾಖೆ ಮತ್ತು ಹಣಕಾಸು ಇಲಾಖೆಯಲ್ಲಿ ನಿರಂತರವಾಗಿ ಕೆಯುಡಬ್ಲ್ಯೂಜೆ ಮಾಡಿದ ಹೋರಾಟದ ಫಲವಾಗಿ ಯೋಜನೆ ಸಾಕಾರಗೊಳ್ಳಲು ಸಾಧ್ಯವಾಗಿದೆ. ಇದಕ್ಕೆ ಸಹಕಾರ ನೀಡಿದ ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರ ಪ್ರಯತ್ನವೂ ಮಹತ್ವದ್ದು ಎಂದು ತಗಡೂರು ತಿಳಿಸಿದ್ದಾರೆ.

ನುಡಿದಂತೆ ನಡೆದು, ಉಚಿತ ಬಸ್ ಪಾಸ್ ಜಾರಿಗೆ ಬರಲು ಕಾರಣರಾದ ಸಿಎಂ ಸಿದ್ದರಾಮಯ್ಯ, ಈ ನಿಟ್ಟಿನಲ್ಲಿ ಎಲ್ಲಾ ರೀತಿಯ ಸಹಕಾರ ನೀಡಿದ ಸಿಎಂ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್, ವಾರ್ತಾ ಇಲಾಖೆ ಆಯುಕ್ತರಾದ ಹೇಮಂತ ನಿಂಬಾಳ್ಕರ್ ಸೇರಿದಂತೆ ಸಹಕಾರ ಕೊಟ್ಟ ಎಲ್ಲರಿಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಕೃತಜ್ಞತೆಗಳು ಸಲ್ಲುತ್ತವೆ ಎಂದು ಅವರು ತಿಳಿಸಿದ್ದಾರೆ.

ಸರಳೀಕರಣ ಅಗತ್ಯ: ಯೋಜನೆ ಮೊದಲು ರೂಪುಗೊಂಡು ಜಾರಿಗೆ ಬರಲಿ ಎನ್ನುವುದು ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ಮೊದಲ ಆದ್ಯತೆ ಆಗಿತ್ತು. ನಿಯಮಾವಳಿಗಳಲ್ಲಿ ಒಂದಿಷ್ಟು ಕಠಿಣ ಷರತ್ತುಗಳಿರುವುದು ಗಮನಕ್ಕೆ ಬಂದಿದೆ. ಕಾರ್ಯ ನಿರತ ಪತ್ರಕರ್ತರಿಗೆ ಎಲ್ಲರಿಗೂ ಉಚಿತ ಬಸ್ ಪಾಸ್ ಸಿಗಬೇಕು ಎನ್ನುವ ನಿಟ್ಟಿನಲ್ಲಿ ನಿಯಮಾವಳಿ ಸರಳೀಕರಣಕ್ಕೆ ಸಂಘವು ಸರ್ಕಾರದ ಗಮನಕ್ಕೆ ತಂದು ಸರಿಪಡಿಸಲು ಕ್ರಮ ಕೈಗೊಳ್ಳಲಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ವಿಜಯಪುರ ಜಿಲ್ಲಾಧ್ಯಕ್ಷ ಸಂಗಮೇಶ ಚೂರಿ, ಪ್ರಜಾವಾಣಿಯ ರಶ್ಮಿ ಎಸ್. ಸೇರಿ ಹಲವರ ನೇಮಕ

# ಕರ್ನಾಟಕ ಮಾಧ್ಯಮ ಅಕಾಡೆಮಿಗೆ ನೂತನ ಸದಸ್ಯರ ನೇಮಕ

■ ಉದಯರಶ್ಮಿ ದಿನಪತ್ರಿಕೆ



ಬೆಂಗಳೂರು: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧೀನದಲ್ಲಿರುವ ಕರ್ನಾಟಕ ಮಾಧ್ಯಮ ಅಕಾಡೆಮಿಗೆ ಸದಸ್ಯರನ್ನು ಸರ್ಕಾರ ನೇಮಕ ಮಾಡಿ ಆದೇಶ ಹೊರಡಿಸಿದೆ.

ಕರ್ನಾಟಕ ಮಾಧ್ಯಮ ಅಕಾಡೆಮಿಯ ನಿಯಮಾವಳಿಗಳಲ್ಲಿ ಅವಕಾಶ ಕಲ್ಪಿಸಿರುವಂತೆ ವಿವಿಧ ಪತ್ರಕರ್ತರ ಸಂಘಟನೆಗಳ ಪ್ರತಿನಿಧಿಗಳನ್ನು, ಅವುಗಳ ಪ್ರಾತಿನಿಧ್ಯದ ಸಂಖ್ಯೆಗೆ ಅನುಗುಣವಾಗಿ ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ.

ಬೆಂಗಳೂರಿನ ಶಿವಾನಂದ ತಗಡೂರು, ದಾವಣಗೆರೆ ಜಿಲ್ಲೆಯ ಜನತಾವಾಣಿಯ ಇ.ಎಂ. ಮಂಜುನಾಥ್, ವಿಜಯಪುರ ಜಿಲ್ಲೆಯ ವಿಜಯ ಕರ್ನಾಟಕ ವರದಿಗಾರ ಸಂಗಮೇಶ ಚೂರಿ, ಬೆಂಗಳೂರಿನ ಸುವರ್ಣ ಟಿ.ವಿಯ ಇಪುಟ್ ಮುಖ್ಯಸ್ಥೆ ಶೋಭಾ ಎಂ.ಸಿ. ಹುಬ್ಬಳ್ಳಿಯ ಪತ್ರಕರ್ತ ಜೆ.ಅಬ್ಬಾಸ್ ಮುಲ್ಲಾ, ಟಿವಿ 9 ಹಿರಿಯ ಪತ್ರಕರ್ತ ಹೆಚ್.ವಿ.ಕಿರಣ್ ಬೆಂಗಳೂರಿನ ಟೈಮ್ಸ್ ಆಫ್ ಇಂಡಿಯಾದ ಹಿರಿಯ ಪತ್ರಕರ್ತ ಅನಿಲ್ ವಿ. ಗೆಜ್ಜಿ, ವಿಜಯ ಕರ್ನಾಟಕ ಪತ್ರಿಕೆಯ ಹಿರಿಯ ಪತ್ರಕರ್ತ ಕೆಂಚೇಗೌಡ, ಉಡುಪಿ ಜಿಲ್ಲೆ ಕುಂದಾಪುರದ ಕುಂದಪ್ರಭ ಸಂಪಾದಕ ಯು. ಸುರೇಂದ್ರ ಶೆಣೈ, ಮೈಸೂರಿನ ಆಂದೋಲನ ದಿನಪತ್ರಿಕೆಯ ಸಂಪಾದಕ ರವಿ ಕೋಟಿ, ಪ್ರಜಾವಾಣಿಯ ರಶ್ಮಿ ಎಸ್ ಇವರನ್ನು ಸದಸ್ಯರನ್ನಾಗಿ ನೇಮಿಸಿದೆ.

ಕರ್ನಾಟಕ ಮಾಧ್ಯಮ ಅಕಾಡೆಮಿಯ ನಿಯಮಾಳಿಗಳ ಪ್ರಕಾರ ಮೈಸೂರು ವಿಶ್ವವಿದ್ಯಾಲಯದ ಸಮೂಹ ಸಂವಹನ ಹಾಗೂ ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥರು, ಮಂಗಳೂರು ವಿಶ್ವವಿದ್ಯಾಲಯದ ಸಮೂಹ ಸಂವಹನ ಹಾಗೂ ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥರು, ದಾವಣಗೆರೆ ವಿಶ್ವವಿದ್ಯಾಲಯದ ಸಮೂಹ ಸಂವಹನ ಹಾಗೂ ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥರು, ಬೆಂಗಳೂರಿನ ಆಕಾಶವಾಣಿಯ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರನ್ನು ಪದನಿಮಿತ್ತ ಸದಸ್ಯರನ್ನಾಗಿ ನೇಮಿಸಿ ಸರ್ಕಾರ ಆದೇಶ ಹೊರಡಿಸಿದೆ.

## ಶಿಕ್ಷಕ ಧರೆಪ್ಪ ಗೆ ಶಿಕ್ಷಕ ರತ್ನ ಪ್ರಶಸ್ತಿ



ಚಡಚಣ: ತಾಲೂಕಿನ ನಿವರಗಿ ಗ್ರಾಮದ ಶಿಕ್ಷಕರಾದ ಧರೆಪ್ಪ. ಅಡವೆಪ್ಪ. ಪೂಜಾರಿ ಅವರು ಲೋಣಿ(ಬಿ.ಕೆ) ಗ್ರಾಮದ ಶ್ರೀ ರುದ್ರೇಶ್ವರ ಪ್ರೌಢಶಾಲೆಯಲ್ಲಿ ಸಮಾಜ ವಿಜ್ಞಾನ ವಿಭಾಗದ ಶಿಕ್ಷಕರಾಗಿ ಕಳೆದ ಐದು ವರ್ಷಗಳಿಂದ ಮಕ್ಕಳಿಗೆ ಜ್ಞಾನಾರ್ಜನೆ ನೀಡುತ್ತಿರುವದನ್ನು ಗುರುತಿಸಿ, ಇವರನ್ನು 'ಚಡಚಣ ತಾಲೂಕು ಮಟ್ಟದ ಶಿಕ್ಷಕರತ್ನ ಪ್ರಶಸ್ತಿ'ಗೆ ಆಯ್ಕೆ ಮಾಡಲಾಗಿದೆ.

ಚಡಚಣ ತಾಲೂಕು ಖಾಸಗಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ಒಕ್ಕೂಟ ಇವರ ವತಿಯಿಂದ ಚಡಚಣ ಪಟ್ಟಣದ ಶ್ರೀ ಸಂಗಮೇಶ್ವರ ಮಂಗಲ ಕಾರ್ಯಾಲಯದಲ್ಲಿ ಸೆ.29 ರ ಭಾನುವಾರದಂದು ಜರುಗುವ 'ಡಾ. ಸರ್ವೆಪಲ್ಲಿ ರಾಧಾಕೃಷ್ಣನ್ ಜನ್ಮದಿನೋತ್ಸವ ಹಾಗೂ ಶಿಕ್ಷಕರ ದಿನಾಚರಣೆ' ಸಮಾರಂಭದಲ್ಲಿ 'ಶಿಕ್ಷಕ ಧರೆಪ್ಪ ಪೂಜಾರಿ' ಇವರನ್ನು 'ಶಿಕ್ಷಕ ರತ್ನ ಪ್ರಶಸ್ತಿ'ಯನ್ನು ಪ್ರದಾನ ಮಾಡಿ, ಗೌರವಿಸಲಾಗುವುದು ಎಂದು ಚಡಚಣ ತಾಲೂಕು ಖಾಸಗಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷ ಶಂಕರ ಹಾವಿನಾಳ ತಿಳಿಸಿದ್ದಾರೆ.

## ಕಂದಾಯ ನಿರೀಕ್ಷಕ ಕಂದಗಲ್ ಗೆ ಪ್ರಶಸ್ತಿ

■ ಉದಯರಶ್ಮಿ ದಿನಪತ್ರಿಕೆ



ಕೆಂಭಾವಿ: ವರ್ಷದ ಅತ್ಯುತ್ತಮ ಕಂದಾಯ ಅಧಿಕಾರಿ 2024 ರ ಪ್ರಶಸ್ತಿಗೆ ವಲಯ ಪ್ರಭಾರಿ ಕಂದಾಯ ನಿರೀಕ್ಷಕ ರಾಜಾಸಾಬ್ ಕಂದಗಲ್ ಆಯ್ಕೆಯಾಗಿದ್ದಾರೆ.

ರಾಜ್ಯಾದಾದ್ಯಂತ ಪ್ರಶಸ್ತಿ ಪುರಸ್ಕೃತ 36 ಗ್ರಾಮ ಆಡಳಿತ ಅಧಿಕಾರಿಗಳಲ್ಲಿ ರಾಜೇಸಾಬ್ ಒಬ್ಬರು. ಸೆಪ್ಟೆಂಬರ್ 27 ರಂದು ಬೆಂಗಳೂರಿನ ವಿಕಾಸ ಸೌಧದಲ್ಲಿ ನಡೆಯಲ್ಲಿರುವ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಕಂದಾಯ ಸಚಿವ ಕೃಷ್ಣ ಬೈರೇಗೌಡ ಪ್ರಶಸ್ತಿಯನ್ನು ನೀಡುವುದಾಗಿ ತಿಳಿದುಬಂದಿದೆ.

# ಗ್ರಾಮ ಆಡಳಿತಾಧಿಕಾರಿಗಳ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ




ಸಿಂದಗಿ: ಇಲಾಖೆಯಿಂದ ಅಭಿವೃದ್ಧಿಪಡಿಸಿರುವ ಮೊಬೈಲ್ ವೆಬ್ ತಂತ್ರಾಂಶಗಳ ಮೂಲಕ ಕರ್ತವ್ಯ ನಿರ್ವಹಿಸಲು ಒತ್ತಡ ಹೇರಲಾಗುತ್ತಿದೆ. ಈ ತಂತ್ರಾಂಶಗಳ ನಿರ್ವಹಣೆಗೆ ಅವಶ್ಯಕವಾಗಿರುವ ಮೊಬೈಲ್, ಲ್ಯಾಪ್‌ಟಾಪ್, ಅದಕ್ಕೆ ಅವಶ್ಯವಿರುವ ಇಂಟರ್‌ನೆಟ್ ಹಾಗೂ ಸ್ಕ್ಯಾನರ್‌ಗಳನ್ನು ಒದಗಿಸದೇ ಕರ್ತವ್ಯ ನಿರ್ವಹಿಸುವಂತೆ ಒತ್ತಡ ಹೇರುತ್ತಿರುವುದರಿಂದ ಗ್ರಾಮ ಆಡಳಿತ ಅಧಿಕಾರಿಗಳು ಮಾನಸಿಕ ಹಿಂಸೆ ಅನುಭವಿಸುತ್ತಿದ್ದೇವೆ ಎಂದು ಗ್ರಾಮ ಆಡಳಿತಾಧಿಕಾರಿಗಳ ಸಂಘದ ಅಧ್ಯಕ್ಷ ಹೆಚ್.ಕೆ.ಅಂಗಡಿ ಹೇಳಿದರು.

ಪಟ್ಟಣದ ತಾಲೂಕು ಆಡಳಿತ ಸೌಧದ ಆವರಣದಲ್ಲಿ ತಾಲೂಕು ಗ್ರಾಮ ಆಡಳಿತಾಧಿಕಾರಿಗಳ ಸಂಘದಿಂದ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಲೇಖನಿ ಸ್ಥಗಿತಗೊಳಿಸುವ ಮೂಲಕ ಹಮ್ಮಿಕೊಂಡ ಅನಿರ್ದಿಷ್ಟಾವಧಿ ಮುಷ್ಕರದಲ್ಲಿ ಮಾತನಾಡಿದ ಅವರು, ರಾಜ್ಯ ಸಂಘದ ಕಾರ್ಯಕಾರಿ ಸಮಿತಿ ತೀರ್ಮಾನದಂತೆ ಗ್ರಾಮ ಆಡಳಿತಾಧಿಕಾರಿಗಳ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಸೆ.26ರಿಂದ ರಾಜ್ಯದಾದ್ಯಂತ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಂಡಿದ್ದೇವೆ ನಮ್ಮ ಬೇಡಿಕೆ ಈಡೇರಿಕೆಯಾಗದೇ ಹೋದರೆ ಈ ಮುಷ್ಕರ ಹೀಗೆ ಲೇಖನಿ ಸ್ಥಗಿತಗೊಳಿಸುವುದು ಮುಂದುವರೆಯುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ಗ್ರಾಮ ಆಡಳಿತಾಧಿಕಾರಿ ಬಸಯ್ಯ ಮಠ ಮಾತನಾಡಿ, ಆಧುನಿಕ ತಂತ್ರಾಂಶಕ್ಕೆ ಸಂಬಂಧಿಸಿದಂತೆ ಅವಶ್ಯ ಸೌಲಭ್ಯವನ್ನು ಕಲ್ಪಿಸುವವರೆಗೆ ತಂತ್ರಾಂಶಗಳ ಕೆಲಸವನ್ನು ಸ್ಥಗಿತಗೊಳಿಸುತ್ತೇವೆ. ಪದೋನ್ನತಿ, ವರ್ಗಾವಣೆ, ನೌಕರರ ಅಮಾನತ್ತು ಸೇರಿ ಹಲವಾರು ಬೇಡಿಕೆಗಳನ್ನು ಸರ್ಕಾರ ಒದಗಿಸಬೇಕು.

ಮೊಬೈಲ್ ಆಫ್ ಬಳಕೆ, ವೆಬ್ ಪೇಜ್ ಸಮಸ್ಯೆ ಸೇರಿದಂತೆ ರಜಾ ದಿನನಗಳಲ್ಲಯೂ ಕನಿಷ್ಠ ಮೂಲಭೂತ ಸೌಲಭ್ಯಗಳಿಲ್ಲದೇ ಸದಾ ಮಾನಸಿಕ ಒತ್ತಡಗಳ ನಡುವೆ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಆಡಳಿತ ಅಧಿಕಾರಿಗಳ ಬೇಡಿಕೆಗಳನ್ನು ರಾಜ್ಯ ಸರಕಾರ ಮಾನವೀಯ ನೆಲಗಟ್ಟಿನ ಆಧಾರದ ಮೇರೆಗೆ ಪರಿಹರಿಸಿ ಅನುಕೂಲ ಮಾಡಿಕೊಡಬೇಕು ಎಂದು ಒತ್ತಾಯಿಸಿದರು.

ಇದೇ ಸಂದರ್ಭದಲ್ಲಿ ಕಂದಾಯ ನಿರೀಕ್ಷಕ ಆಯ್.ಎ.ಮಕಾಂದಾರ, ಗ್ರಾಮ ಆಡಳಿತಾಧಿಕಾರಿಗಳಾದ ಪಿ.ಕೆ. ಹಿಡೇದ, ಮಲೀಕ ಭಾಗವಾನ, ಪಿ.ಎಸ್. ಕದಂ, ಎಚ್.ಜಿ. ಶೇಖ, ನಿಖಿಲ್‌ಅಹ್ಮದ ಖಾನಾಪುರ, ಎಸ್. ಎಸ್.ಬಿದರಕುಂದಿ, ಬಸಯ್ಯ ಮಠ, ಜಿಲ್ಲಾ ಉಪಾಧ್ಯಕ್ಷೆ ಸರಸ್ವತಿ ಮೋರೆ, ಪ್ರಧಾನ ಕಾರ್ಯದರ್ಶಿ ವಿನೋದ ಕರ್ನಾಳ, ಆಶೀಫ್ ಜಮಾದಾರ, ರೆಹಮಾನ ಕಣಮೇಶ್ವರ, ಕಜಾಂಚಿ ಮೇಘಾ ಕುಳಗೇರಿಮಠ, ಗೌರವಾಧ್ಯಕ್ಷ ಬಿ.ಬಿ.ಕಾರಿಮುಂಗಿ, ಬನ್ನೆಪ್ಪ ಅತ್ನೂರ, ಸುನೀಲ ಬಂಡಿವಡ್ಡರ, ನಾಗಮ್ಮ ಸಾಲಿ ನಿಂಗಮ್ಮ ದೊಡಮನಿ, ವಿಜಯಲಕ್ಷ್ಮಿ ಸೇರಿದಂತೆ ವಿವಿಧ ಸಂಘ, ಸಂಘಟನೆಯ ಮುಖಂಡರು, ಅಟಲ್ ಜನಸ್ನೇಹಿ ಕೇಂದ್ರವು ಮುಷ್ಕರಕ್ಕೆ ಸಾಥ್ ನೀಡಿದ್ದಾರೆ.

# 21 ನೇ ಶತಮಾನವು ನುರಿತವರ ಯುಗವಾಗಿದೆ: ಶಶೀಲ್ ನಮೋಶಿ

ಕಲಬುರಗಿ: 21ನೇ ಶತಮಾನವು ನುರಿತವರ ಯುಗವಾಗಿದೆ. ಜಾಗತೀಕರಣಗೊಂಡ ಆರ್ಥಿಕತೆಯಲ್ಲಿ, ಭಾರತವು ತನ್ನ ಉದ್ಯೋಗಿಗಳು ಕೌಶಲ್ಯಪೂರ್ಣವಾಗಿರದ ಹೊರತು ಅಭಿವೃದ್ಧಿ ಹೊಂದಿದ ರಾಷ್ಟ್ರಗಳೊಂದಿಗೆ ಸ್ಪರ್ಧಿಸಲು ಆಶಿಸುವುದಿಲ್ಲ. ದುರದೃಷ್ಟವಶಾತ್, ನಮ್ಮ ಶಿಕ್ಷಣ ವ್ಯವಸ್ಥೆಯು ಬದಲಾಗುತ್ತಿರುವ ಕಾಲಕ್ಕೆ ತಕ್ಕಂತೆ ನಡೆಯುತ್ತಿಲ್ಲ ಮತ್ತು ನಿರುದ್ಯೋಗಿ ಪದವೀಧರರನ್ನು ಹೊರಹಾಕುತ್ತಲೇ ಇದೆ. ಎಂದು ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಶ್ರೀ ಶಶೀಲ್ ಜಿ ನಮೋಶಿ ಹೇಳಿದರು ಅವರು ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಎಂ ಎಸ್ ಇರಾಣಿ ಕಾಲೇಜಿನಲ್ಲಿ ನಡೆದ. ಎಂ ಎಸ್ ಇರಾಣಿ ಕಾಲೇಜು, ಆಂತರಿಕ ಗುಣಮಟ್ಟ ಕೋಶ ಹಾಗೂ ವೃತ್ತಿ ಮಾರ್ಗದರ್ಶನ ಕೋಶ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಉದ್ಯೋಗಶಿಲತೆಯಲ್ಲಿ ಕೌಶಲ್ಯ ವರ್ಧನೆಯ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು ಭಾರತದಲ್ಲಿ ಇಂದು ಉದ್ಯೋಗ,ನೌಕರಿ ಎಂಬ ಪದ ಬಹಳ ಮುಖ್ಯವಾಗಿ ಹೋಗಿದೆ ಇಂದು ಭಾರತಿಯರಿಗೆ ಉದ್ಯೋಗ ಅವಕಾಶ ಸಿಗಬೇಕಾದರೆ ಹೀಗಾಗಿ, ಭಾರತೀಯ ಯುವಕರಿಗೆ ಕೌಶಲ್ಯ ಅಭಿವೃದ್ಧಿ ಬಹಳ ಮುಖ್ಯ ಎಂಬುದು ಸ್ಪಷ್ಟವಾಗಿದೆ. ಇದು ಅವರ ವೃತ್ತಿಜೀವನದಲ್ಲಿ ಯಶಸ್ಸಿನ ಉತ್ತಮ ಅವಕಾಶವನ್ನು ನೀಡುತ್ತದೆ ಆದರೆ ಒಟ್ಟಾರೆಯಾಗಿ ದೇಶದ ಆರ್ಥಿಕತೆಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ ಎಂದು ಹೇಳಿದರು ಹಿಂದೆ ಅಟಲ್ ಬಿಹಾರಿ ವಾಜಪೇಯಿ ನೇತೃತ್ವದ ಕೇಂದ್ರ ಸರ್ಕಾರ ಅಂದಿನ ಕೇಂದ್ರ ಸಚಿವರಾದ ಪ್ರಮೋದ್ ಮಹಾಜನ್ ನೇತೃತ್ವದಲ್ಲಿ ಯುವಜನತೆಯ ಉದ್ಯೋಗ ಅವಕಾಶಕ್ಕಾಗಿ ಸಾವಿರಾರು ಕೋಟಿ ರೂ ಜಾಗತೀಕ ಬ್ಯಾಂಕ್ ನಿಂದ ಸಾಲ ಪಡೆದು ವಿನಿಯೋಗಿಸಿತ್ತು. 2023 ರಿಂದ ಸರ್ಕಾರಗಳು ವಿಶ್ವವಿದ್ಯಾಲಯಗಳೊಂದಿಗೆ ಕೌಶಲ್ಯ ಅಭಿವೃದ್ಧಿಗಾಗಿ ಹೊಸ ಹೊಸ ಉದ್ಯೋಗ ಆಧಾರಿತ ಕೋರ್ಸಗಳನ್ನು ತೆಗೆದು ಅದರ ಮುಖಾಂತರ ಕೌಶಲ್ಯಗಳನ್ನು ನೀಡುತ್ತಿವೆ ಎಂದು ಹೇಳಿದರು. ಒಟ್ಟಾರೆಯಾಗಿ, ಕೌಶಲ್ಯ ಅಭಿವೃದ್ಧಿಯು ಭಾರತೀಯ ಯುವಕರ ಶಿಕ್ಷಣ ಮತ್ತು ಬೆಳವಣಿಗೆಯ ಅತ್ಯಗತ್ಯ ಭಾಗವಾಗಿದೆ. ಕೌಶಲ್ಯ ತರಬೇತಿಯಲ್ಲಿ ಹೂಡಿಕೆ ಮಾಡುವ ಮೂಲಕ ಮತ್ತು ಉದ್ಯಮಶೀಲತೆಯನ್ನು ಪ್ರೋತ್ಸಾಹಿಸುವ ಮೂಲಕ, ಭಾರತವು ತನ್ನ ಯುವಜನರಿಗೆ ಸಮಾಜದ ಉತ್ಪಾದಕ ಸದಸ್ಯರಾಗಲು ಹೆಚ್ಚಿನ ಅವಕಾಶಗಳನ್ನು ಒದಗಿಸಬಹುದು. ಸುಧಾರಿತ ಕೌಶಲ್ಯಗಳೊಂದಿಗೆ, ಅವರು ತಮ್ಮ ಕ್ಷೇತ್ರಗಳಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತದೆ, ಜೊತೆಗೆ ರಾಷ್ಟ್ರದ ಆರ್ಥಿಕ ಬೆಳವಣಿಗೆಗೆ ಅರ್ಥಪೂರ್ಣವಾಗಿ ಕೊಡುಗೆ ನೀಡುತ್ತಾರೆ ಎಂದು ಹೇಳಿದರು ಕಲಬುರ್ಗಿ ಜಿಲ್ಲೆಯ ಕೌಶಲ್ಯಾಭಿವೃದ್ಧಿ ಅಧಿಕಾರಿ ಶ್ರೀ ಮುರಳಿದರ ಮುಖ್ಯ ಅತಿಥಿಗಳಾಗಿದ್ದರು. ಸಿಡಾಕನ ಕಲಬುರ್ಗಿ ವಿಭಾಗಿಯ ಅಧಿಕಾರಿ ಸೈಯದ್ ಅಶ್ಫಾಕ್ ಅಹ್ಮದ್ ವಿಷಯ ಕುರಿತು ಮಾಹಿತಿ ಭಾಷಣ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಚಾರ್ಯರಾದ ಪ್ರೊ ರೋಹಿಣಿಕುಮಾರ್ ಹಿಳ್ಳಿ ವಹಿಸಿದ್ದರು ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರಾದ ಡಾ ಎಸ್ ಆರ್ ಹರವಾಳ, ಡಾ ಕಿರಣ್ ದೇಶಮುಖ್ ಸಂಪನ್ಮೂಲ ವ್ಯಕ್ತಗಳಾದ ಶ್ರೀ ಗುರುನಾಥ ಬಡಿಗೇರ, ಪ್ರೆ ವಿದ್ಯಾ ಪಾಟೀಲ್, ಡಾ ರಾಜು ತೆಗ್ಗೆಳ್ಳಿ, ಡಾ ಜಯಶ್ರೀ ಬಡಿಗೇರ, ಡಾ ರಾಜಶೇಖರ ಬೀರನಳ್ಳಿ, ಡಾ ಪ್ರಾಣೇಶ್ ,ಡಾ ನೀಲಕಂಠ ಎಸ್ ವಾಲಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಡಾ ಜಯಶ್ರೀ ಬಡಿಗೇರ ಸ್ವಾಗತಿಸಿದರು ವಿದ್ಯಾರ್ಥಿನಿ ನಾಗರತ್ನ ಕಾರ್ಯಕ್ರಮ ನಿರೂಪಿಸಿದರು ಕುಮಾರಿ ಶ್ವೇತಾ ಪ್ರಾರ್ಥನೆ ಮಾಡಿದರು.



### ವಿಜಯಪುರದ ಸಂಗನಬಸವ ಶಿಶುನಿಕೇತನ ಶಾಲೆಯಲ್ಲಿ ಆಯೋಜನೆ


# ಹಣ್ಣುಗಳು & ವಿವಿಧ ತರಕಾರಿಗಳ ಚಟುವಟಿಕೆ ಪ್ರದರ್ಶನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಶ್ರೀ ಸಿದ್ದೇಶ್ವರ ಸಂಸ್ಥೆಯ ಅಡಿಯಲ್ಲಿ ನಡೆಯುವ ಸಂಗನಬಸವ ಶಿಶುನಿಕೇತನ ಶಾಲೆಯಲ್ಲಿ ಗುರುವಾರ ಯು ಕೆ ಜಿ ಮುದ್ದು ವಿದ್ಯಾರ್ಥಿಗಳಿಂದ ವಿವಿಧ ರೀತಿಯ ಹಣ್ಣು ಹಮತ್ತು ವಿವಿಧ ರೀತಿಯ ತರಕಾರಿ ಚಟುವಟಿಕೆ ಏರ್ಪಡಿಸಲಾಗಿತ್ತು ಈ ಸಂದರ್ಭದಲ್ಲಿ ಕಿಂಡರ್‌ಗಾರ್ಟನ್ ಮಕ್ಕಳು ವಿವಿಧ ಹಣ್ಣು ಮತ್ತು ತರಕಾರಿಗಳ ತೊಡಗು ಉಡಿದು ಶಾಲೆಯಲ್ಲಿ ಗಮನ ಸೆಳೆದರು.

ಚಟುವಟಿಕೆಗೆ ಕೊಡುಗೆ ನೀಡಿದ ಮಕ್ಕಳು ಟೊಮ್ಯಾಟೊ, ಬೆಳ್ಳುಳ್ಳಿ, ಪೈನಾಪಲ್, ಕಿವಿ ಸೇರಿದಂತೆ ವಿವಿಧ ಹಣ್ಣುಗಳ ಆಕೃತಿಯಲ್ಲಿ ಸಿದ್ಧಗೊಂಡು ಮುದ್ರಣದಂತ ಸೊಬಗಿನೊಂದಿಗೆ ಪ್ರದರ್ಶನ ನೀಡಿದರು. ಮಕ್ಕಳ ಉತ್ಸಾಹದಿಂದ ಈ ಕಾರ್ಯಕ್ರಮ ಮತ್ತಷ್ಟು ಚೈತನ್ಯವನ್ನು ಪಡೆದುಕೊಂಡಿತು.

ಯು ಕೆ ಜಿ ವಿದ್ಯಾರ್ಥಿಗಳು ಹಣ್ಣುಗಳು ಮತ್ತು ತರಕಾರಿಗಳಲ್ಲಿ ತಜ್ಞರಂತೆ ಪ್ರದರ್ಶನವನ್ನು ಆಯೋಜಿಸುತ್ತಿದ್ದಾರೆ. ಈ ಉತ್ಸವವು ಮಕ್ಕಳಿಗೆ ಆರೋಗ್ಯಕರ ಆಹಾರ ಮತ್ತು ಪೋಷಣೆಯ ಮಹತ್ವವನ್ನು ಅರಿಯಲು ಸಹಾಯ ಮಾಡುತ್ತದೆ. ಪ್ರದರ್ಶನದಲ್ಲಿ ಸೃಜನಾತ್ಮಕ ಶ್ರೇಣೀಬದ್ಧತೆ, ಕ್ರಿಯಾತ್ಮಕ ಚಟುವಟಿಕೆಗಳು ಪಾಲಕರ ಪ್ರಶಂಸೆಗೆ ಪಾತ್ರವಾದವು.ಈ ಪ್ರದರ್ಶನವನ್ನು ಶ್ರೀ ಸಿದ್ದೇಶ್ವರ ಸಂಸ್ಥೆಯ ಚೇರ್ಮನ್ ಬಸಯ್ಯ ಹಿರೇಮಠ ರವರು ಮತ್ತು ಶಾಲೆಯ ನಾಮಿನಿ



ಚೇರ್ಮನ್ ಎಸ್.ಎಚ್.ನಾಡಗೌಡ ರವರು ಹಾಗೂ ಶಾಲೆಯ ಆಡಳಿತಾದಿಕಾರಿಗಳು ಮತ್ತು ಶಾಲೆಯ ಸಿಎಒ ಎಚ್.ವೆಂಕಟೇಶ ಹಾಗೂ ಪ್ರಾಂಶುಪಾಲರಾದ ಶ್ರೀಮತಿ ವಿಜಯಲಕ್ಷ್ಮೀ ರಾ ಪಟ್ಟೇದ ಮತ್ತು ಉಪ ಪ್ರಾಂಶುಪಾಲೆ ಶ್ರೀದೇವಿ ಕನ್ನಾಳ ಉಪ ಪ್ರಾಂಶುಪಾಲ ಮಹೇಶ ಮತ್ತು ದಾನೇಶ ಹಾಗೂ ಯು ಕೆ ಜಿ ಶಿಕ್ಷಕಿ ಶ್ರೀಮತಿ ಅಂಬಿಕಾ ಪ್ಯಾಟಿ ಹಾಗೂ ಶಾಲೆಯ ಶಿಕ್ಷಕ ಶಿಕ್ಷಕೇತರ ಸಿಬ್ಬಂದಿ ವರ್ಗದವರು ಉಪಸ್ಥಿತ-ರಿದ್ದರು

## ಗಮನ ಸೆಳೆದ ಯುಕೆಜಿ ಮಕ್ಕಳು

ಯು ಕೆ ಜಿ ಮಕ್ಕಳು ಹಣ್ಣುಗಳು ಮತ್ತು ತರಕಾರಿ ಪ್ರದರ್ಶನ ಯಶಸ್ವಿಯಾಗಿ ನಡೆಯಿತುಯು ಕೆ ಜಿ ವಿದ್ಯಾರ್ಥಿಗಳು ಹಣ್ಣುಗಳು ಮತ್ತು ತರಕಾರಿಗಳನ್ನು ತೋ-ರಿಸುವ ಉಲ್ಲಾಸಕಾರಿ ಪ್ರದರ್ಶನವನ್ನು ಆಯೋಜಿಸಿದರು. ಈ ಪ್ರದರ್ಶನದಲ್ಲಿ ವಿದ್ಯಾರ್ಥಿಗಳು ತಮ್ಮ ಕಲಿತ ವಿಚಾರಗಳನ್ನು ಹಂಚಿಕೊಳ್ಳುವ ಮೂಲಕ ಹಣ್ಣುಗಳು ಮತ್ತು ತರಕಾರಿಗಳ ವಿಭಿನ್ನ ತೋರಣೆಗಳನ್ನು ಸೃಜಿಸಿದರು. ಕ್ರಿಯಾತ್ಮಕ ಆಟಗಳು ಮತ್ತು ಕಲಾ ಪ್ರೋಜೆಕ್ಟ್‌ಗಳನ್ನು ಒಳಗೊಂಡ ಚಟುವಟಿಕೆಗಳು, ಮಕ್ಕಳಿಗೆ ಆನಂದದೊಂದಿಗೆ ಯಶಸ್ವಿಯಾಗಿ ನಡೆಯಿತು ಪೋಷಕರು ಮತ್ತು ಶಿಕ್ಷಕರು ಈ ಕಾರ್ಯಕ್ರಮವನ್ನು ನೋಡಲು ಬಂದು ಮಕ್ಕಳ ಪ್ರಯತ್ನವನ್ನು ಪ್ರಶಂಸಿಸಿದರು. ವಿದ್ಯಾರ್ಥಿಗಳು ತಮ್ಮ ಜ್ಞಾನವನ್ನು ಮಾತ್ರವಲ್ಲ, ಸೃಜನಶೀಲತೆಯನ್ನು ತೋ-ರಿಸಿದರು, ಇದು ಎಲ್ಲರಿಗೂ ಆನಂದದ ಅನುಭವ ನೀಡಿತು.ಈ ಪ್ರದರ್ಶನವು ಯಶಸ್ವಿಯಾಗಿ ನಡೆಯಿತು, ಮಕ್ಕಳಲ್ಲಿ ಆರೋಗ್ಯಕರ ಆಹಾರದ ಮೆಚ್ಚಿನನ್ನು ಮತ್ತು ಸಮುದಾಯದೊಂದಿಗೆ ಬೆಳೆಸಲು ಪ್ರೇರಣೆಯನ್ನು ನೀಡಿತು. ಮುದ್ದು ವಿದ್ಯಾರ್ಥಿಗಳು ಒಂದೊಂದು ಹಣ್ಣಿನ ಬಗ್ಗೆ ಮಾತನಾಡಿದರು. ಮತ್ತು ವಿವಿಧ ರೀತಿಯ ತರಕಾರಿಯ ಬಗ್ಗೆ ವಿವರ ನೀಡಿದರು

# ಭಾರತದಲ್ಲಿ ಆಯುರ್ವೇದ ವಿಜ್ಞಾನಕ್ಕೆ ಹೆಚ್ಚಿನ ಮಹತ್ವ :ಡಾ.ಮಲ್ಲಮ್ಮ




■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸಂಸ್ಕೃತದಲ್ಲಿ ಶ್ಲೋಕದ ರೂಪದಲ್ಲಿರುವ ಆಯುರ್ವೇದ ಔಷಧಿಗಳ ಮಾಹಿತಿಯನ್ನು ಯುವವೈದ್ಯರು ಮತ್ತು ಸಂಶೋಧಕರಿಗೆ ಸರಳವಾಗಿ ಅಧ್ಯಯನ ಮಾಡಲು 'ಅಗದ ಸಮುಚ್ಚಯ' ಪುಸ್ತಕ ವರದಾನವಾಗಿದೆ ಎಂದು ಬಿ.ಎಲ್.ಡಿ.ಇ ಸಂಸ್ಥೆಯ ಮುಖ್ಯ ಸಲಹೆಗಾರ ಮತ್ತು ಡೀಮ್ಡ್ ವಿಶ್ವವಿದ್ಯಾಲಯದ ರಜಿಸ್ಟ್ರಾರ್ ಡಾ. ಆರ್.ವಿ.ಕುಲಕರ್ಣಿ ಹೇಳಿದ್ದಾರೆ.

ಗುರುವಾರ ವಿವಿ ಕಚೇರಿಯಲ್ಲಿ ಎ. ವಿ. ಎಸ್ ಆಯುರ್ವೇದ ಕಾಲೇಜಿನ ಅಗದ ತಂತ್ರವಿಭಾಗದ ಮುಖ್ಯಸ್ಥೆ ಡಾ.ಮಲ್ಲಮ್ಮ ಬಿರಾದಾರ ಅವರು ರಚಿಸಿದ 'ಅಗದ ಸಮುಚ್ಚಯ' ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದರು.

ಡಾ.ಮಲ್ಲಮ್ಮ ಬಿರಾದಾರ ಮಾತನಾಡಿ, ಪ್ರಾಚೀನ ಕಾಲದಿಂದಲೂ ಭಾರತದಲ್ಲಿ ಆಯುರ್ವೇದ ವಿಜ್ಞಾನಕ್ಕೆ ಹೆಚ್ಚಿನ ಮಹತ್ವ ನೀಡಲಾಗುತ್ತಿದೆ. ಈ ಪುಸ್ತಕದಲ್ಲಿ ಆಯುರ್ವೇದದಲ್ಲಿ ಉಲ್ಲೇಖಿಸಿರುವ ಬಹಳಷ್ಟು ವನಸ್ಪತಿ ಮತ್ತು ಗಿಡಮೂಲಿಕೆಗಳ ಮಾಹಿತಿ ಇದೆ. ಒಂದೇ ಹೆಸರನ್ನು ಹಲವಾರು ಗಿಡಮೂಲಿಕೆಗಳಿಗೆ ಬಳಸಿರುವುದರಿಂದ ನಿಜವಾದ ವಿಷನಾಶಕ ದ್ರವ್ಯ ಯಾವುದು? ಯಾವ ಭಾಗದಲ್ಲಿ ಉತ್ಕೃಷ್ಟ ಗುಣಗಳಿವೆ? ಎಂಬುದನ್ನು ಸವಿಸ್ತಾರವಾಗಿ ತಿಳಿಸಲಾಗಿದೆ. ವಿಷಜಂತುಗಳಿಂದ ಅಪಾಯ ಎದುರಾದ ಸಂದರ್ಭದಲ್ಲಿ ತುರ್ತಾಗಿ ಕೈಗೊಳ್ಳಬೇಕಿರುವ ಕ್ರಮಗಳು, ಔಷಧಿ ಬಳಕೆ ವಿಧಾನದ ಕುರಿತು ಮಾಹಿತಿ ನೀಡಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬಿ.ಎಲ್.ಡಿ.ಇ ಸಂಸ್ಥೆಯ ಆಡಳಿತಾಧಿಕಾರಿಗಳಾದ ಎಸ್.ಎಚ್.ಲಗಳಿ, ವಿಲಾಸ ಬಗಲಿ, ಡಾ.ಮಹಾಂತೇಶ ಬಿರಾದಾರ ಮತ್ತು ಡಾ.ಪ್ರಲ್ಹಾದ ಪಾಟೀಲ ಉಪಸ್ಥಿತರಿದ್ದರು.

### ಗ್ರಾಮ ಆಡಳಿತ ಲೆಕ್ಕಾಧಿಕಾರಿಗಳ ಹೋರಾಟಕ್ಕೆ ಬೆಂಬಲ ಸೂಚಿಸಿದ ರೈತ ಮುಖಂಡರು

# ಗ್ರಾಮ ಲೆಕ್ಕಾಧಿಕಾರಿಗಳಿಗೆ ಸ್ವಂತ ಸೂರು ಒದಗಿಸಲು ರೈತ ಸಂಘ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಗ್ರಾಮ ಲೆಕ್ಕಾಧಿಕಾರಿಗಳಿಗೆ ಕೆಲಸದ ಒತ್ತಡ ಹೆಚ್ಚಾಗಿ ರಾಜ್ಯದಲ್ಲಿ 50 ಕ್ಕೂ ಹೆಚ್ಚು ತಲಾಟಿಗಳು ಆತ್ಮಹತ್ಯೆ ಮಾಡಿಕೊಂಡಿರುತ್ತಾರೆ, ಸಾರ್ವಜನಿಕರಿಗೆ, ರೈತ-ರಿಗೆ ವಿವಿಧ ಸೇವೆಗಳನ್ನು ಒದಗಿಸಬೇಕಾಗಿರುವ ಗ್ರಾಮ ಆಡಳಿತ ಲೆಕ್ಕಾಧಿಕಾರಿಗಳು ಹಾಗೂ ಸಹಾಯಕ ಸಲಹೆಗಾರರಿಗೆ ಕೆಲಸ ಹೆಚ್ಚಾಗಿ ಮಾನಸಿಕವಾಗಿ ನೊಂದುಕೊಳ್ಳುವುದು ಮಾತ್ರವಲ್ಲದೇ ಕೆಲಸದ ಒತ್ತಡದಿಂದ ಸಾರ್ವಜನಿಕರಿಗೆ ಸಿಗದೇ ಜನಸಾಮಾನ್ಯರಿಂದ ಹಿಡಿ ಶಾಪ ಹಾಕಿಸಿಕೊಳ್ಳುತ್ತಿದ್ದಾರೆ ಎಂದು ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಆರೋಪಿಸಿದೆ. ಈ ಕುರಿತು ಜಿಲ್ಲಾಧಿಕಾರಿಗಳ ಮೂಲಕ ಕಂದಾಯ ಸಚಿವ ಕೃಷ್ಣ ಭೈರೆಗೌಡ ಅವರಿಗೆ ಮನವಿ ಸಲ್ಲಿಸಿ




ಮಾತನಾಡಿದ ಮುಖಂಡರು, ಸರಕಾರ ವಿವಿಧ ಇಲಾಖೆಗಳ ನಿರ್ಮಾಣಕ್ಕಾಗಿ ಸಾವಿರಾರು ಕೋಟಿ ವಿನಾಃ ಹರಣ ಮಾಡಿ, ಯಾವುದೇ ಕೆಲಸಕ್ಕೆ ಬರದ ಕಟ್ಟಡ ಸೇರಿದಂತೆ ಬೇಕಾಬಿಟ್ಟಿ ಯೋಜನೆಗಳಿಗೆ ಹಣ ವ್ಯಯ ಮಾಡುತ್ತಿದೆ. ಆದರೆ ಇಂದು ಗ್ರಾಮ ಲೆಕ್ಕಾಧಿಕಾರಿಗಳಿಗೆ ಸ್ವಂತ ಸೂರು ಇಲ್ಲದೇ ಹಳ್ಳಿ ಹಳ್ಳಿ ತಿರುಗಾಡಿ ಕೊನೆಗೆ ತಾಲೂಕಾ ಕಛೇರಿಗೆ ಅಲೆದಾಡಿ ಕೆಲಸ ಮುಗಿಸಬೇಕಾದ ಅನಿವಾರ್ಯತೆ ಇದೆ. ಅವರಿಗೆ ಕೆಲಸದ ಒತ್ತಡ ಕಡಿಮೆ ಮಾಡಬೇಕು, ಜೊತೆಗೆ ಎಲ್ಲಾ ಸಾಜಾಗಳಲ್ಲಿ ಕಟ್ಟಡದ ವ್ಯವಸ್ಥೆ ಮಾಡಿ, ಅವಶ್ಯವಿರುವ ಕಂಪ್ಯೂಟರ ಹಾಗೂ ಇಂಟ-ರನೆಟ್ ಸೌಲಭ್ಯದ ವ್ಯವಸ್ಥೆ ಮಾಡಿ ಸಾರ್ವಜನಿಕರಿಗೆ ಹಾಗೂ ರೈತರಿಗೆ ಕಚೇರಿಯ ಅವಧಿಯಲ್ಲಿ ಸಿಗುವ ಹಾಗೆ ಅನುಕೂಲ ಮಾಡಿಕೊಡಬೇಕೆಂದು ಆಗ್ರಹಿಸಿದರು. ಈ ವೇಳೆ ರೈತ ಮುಖಂಡರಾದ ಸುಭಾಸ ಶಿರಬೂರ, ಜಿಲ್ಲಾ ಸಂಚಾಲಕ ರಾಮನಗೌಡ ಪಾಟೀಲ, ಕೋಲ್ಹಾರ ಅಧ್ಯಕ್ಷ ಸೋಮು ಬಿರಾದಾರ, ವಿಜಯಪುರ ಅಧ್ಯಕ್ಷ ಮಹಾದೇವಪ್ಪ ತೇಲಿ, ತಿಕೋಟಾ ಅಧ್ಯಕ್ಷ ಸಾತಲಿಂಗಯ್ಯ ಸಾಲಿಮಠ, ನಜೀರ ನಂದರಗಿ, ಶಾನೂರ ನಂದರಗಿ, ಸಂಗಪ್ಪ ಟಕ್ಕೆ, ಬಸ್ಸು ನ್ಯಾಮಗೊಂಡ, ಮಹಾದೇವ ಕದಂ, ಅಲ್ಲಮಪ್ರಭು ಗದ್ಯಾಳ, ಸುಗೇಂದ್ರ ನಾಲವಡೆ, ರಾಜಕುಮಾರ ಹಿರೇಕುರಬೂರ, ಸಂಗನಬಸಪ್ಪ ಹಡಕ್ಯಾಳ, ಅಶೋಕ ಹಿಪ್ಪರಗಿ, ಮಲ್ಲಪ್ಪ ಹಿಪ್ಪರಗಿ, ಸಂಗೋಂಡ ಹಿಪ್ಪರಗಿ, ಬಸಗೊಂಡ ಹಿಪ್ಪರಗಿ, ಪ್ರಕಾಶ ತಿಕೋಟಾ, ಕುಪ್ಪದ ಹಿಪ್ಪರಗಿ, ಅಶೋಕ ಗದ್ಯಾಳ ಸೇರಿದಂತೆ ಜಿಲ್ಲೆಯ ಎಲ್ಲಾ ಗ್ರಾಮ ಲೆಕ್ಕಾಧಿಕಾರಿಗಳು ಉಪಸ್ಥಿತರಿದ್ದರು.

# ಅಂಗನವಾಡಿ ಶಿಕ್ಷಣ ಮಕ್ಕಳಿಗೆ ಅಡಿಪಾಯ :ಕೆ.ಕೆ.ಚವ್ಹಾಣ

ದೇವರಹಿಪ್ಪರಗಿ: ಇಂದಿನ ಮಕ್ಕಳು ಭವಿಷ್ಯದ ಪ್ರಜೆಗಳು ಆದ್ದರಿಂದ ಅಂಗನವಾಡಿ ಶಿಕ್ಷಣ ಮಕ್ಕಳಿಗೆ ಅಗತ್ಯ ಹಾಗೂ ಅಡಿಪಾಯವಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಉಪನಿರ್ದೇಶಕ ಕೆ.ಕೆ.ಚವ್ಹಾಣ ಹೇಳಿದರು. ತಾಲ್ಲೂಕಿನ ಕೋರವಾರ ಗ್ರಾಮದಲ್ಲಿ ಗುರುವಾರ ಜರುಗಿದ ರಾಷ್ಟ್ರೀಯ ಪೋಷಣಾ ಅಭಿಯಾನದಲ್ಲಿ ಪಾಲ್ಗೊಂಡು ಪೋಷಣಾ ಮಾಸಾಚರಣೆ ಮಹತ್ವವನ್ನು ಉದ್ದೇಶಿಸಿ ಮಾತನಾಡಿದರು. ಮಕ್ಕಳಲ್ಲಿ ತಾರತಮ್ಯ ತೋರದೆ ಹೆಣ್ಣುಮಕ್ಕಳ ರಕ್ಷಣೆ, ಶಿಕ್ಷಣಕ್ಕೆ ಒತ್ತು ನೀಡಲು ಜೊತೆಗೆ ತಾಯಿ ಮತ್ತು ಮಗುವಿನ ಆರೋಗ್ಯದ ಕುರಿತು ಕಾಳಜಿ ವಹಿಸಲು ಅವರು ಕರೆ ನೀಡಿದರು. ಸಿಂದಗಿ ತಾಲ್ಲೂಕು ಸಿಡಿಪಿಓ ಎಸ್.ಎನ್.ಹಿರೇಮಠ ಮಾತನಾಡಿ, ಮಹಿಳೆ ಮತ್ತು ಮಕ್ಕಳಲ್ಲಿ ಅಪೌಷ್ಟಿಕತೆ ಉಂಟಾಗದಿರಲು ಸಲಹೆ ನೀಡಿದರು.ಪೋಷಣಾ ಮಾಹ ಅಂಗವಾಗಿ ಗರ್ಭಿಣಿಯ-ರಿಗೆ ಸೀಮಂತ ಕಾರ್ಯ ಕೈಗೊಂಡು ಸಸಿ ವಿತರಿಸಿ ಮಕ್ಕಳಂತೆ ಪೋಷಿಸಲು ಹೇಳಲಾಯಿತು. ಮಕ್ಕಳಿಗೆ ಅನ್ನಪ್ರಾಶನ, ಹೆಣ್ಣುಮಕ್ಕಳ ಜನ್ಮದಿನಾಚರಣೆ, ಹಾಗೂ ಹಳ್ಳಿಜೀವನ ಸೊಗಡನ್ನು ಪ್ರದರ್ಶಿಸಲಾಯಿತು.ಪೋಷಣಾ ಅಭಿಯಾನ ತಾಲ್ಲೂಕು ಸಂಯೋಜಕ ಪ್ರಮೋದ ಬೆಳಗಾವಿ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸೈನಾಬಿ ಬ್ಯಾಕೋಡ, ಸದಸ್ಯರಾದ ರಾಜಶೇಖರ ಛಾಯಾಗೋಳ, ಮಲ್ಲಪ್ಪ ಪಟ್ಟಣ, ಲಕ್ಷ್ಮೀ ಪಾಟೀಲ, ಉಜ್ವಲ ಸಂಸ್ಥೆ ಸಂಯೋಜಕ ಸಾಗರ ಘಾಟಗೆ, ರೈತಸಂಘದ ತಾಲ್ಲೂಕು ಅಧ್ಯಕ್ಷ ಈರಣ್ಣ ಕುಳೇಕುಮಟಗಿ, ಹಿರಿಯ ಮೇಲ್ವಿಚಾರಕಿಯರಾದ ಸುಧಾ ಭಾವಿಕಟ್ಟಿ, ಎಸ್.ಎಚ್.ಕಾಗಲ್, ಎಸ್. ಆರ್.ನಾಯಿಕ್, ಕಾರ್ಯಕರ್ತೆ ಪ್ರೇಮಾ ಕುಳೇಕುಮಟಗಿ, ಬಾಪುಗೌಡ ನಂದಗೌಡರ, ಶಶಿಕಾಂತ ಸುಂಗಠಾಣ ಗ್ರಾಮದ ಅಂಗನವಾಡಿ, ಆಶಾ ಕಾರ್ಯಕರ್ತೆಯರು, ಸಹಾಯಕಿಯರು ಹಾಗೂ ತಾಯಂದಿರು ಇದ್ದರು.

### ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಅಧಿಕಾರಿಗಳಿಗೆ ಕರೆ

# ಸ್ಮಾರಕಗಳ ರಕ್ಷಣೆಯ ಜೊತೆಗೆ ಸ್ವಚ್ಛತೆಗೆ ಆದ್ಯತೆ ನೀಡಿ




■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಇಲ್ಲಿನ ಪ್ರವಾಸಿ ತಾಣಗಳು ದೇಶ, ವಿದೇಶದ ಪ್ರವಾಸಿಗರನ್ನು ಆಕರ್ಷಿಸುತ್ತಿದೆ. ಗೋಳ ಗುಮ್ಮಟದ ದ ಆವರಣದಲ್ಲಿ ಆವರಣದಲ್ಲಿ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಆಚರಿಸುತ್ತಿರುವುದು ಹೆಮ್ಮೆಯ ವಿಷಯ, ಸ್ಮಾರಕಗಳ ರಕ್ಷಣೆಯ ಜೊತೆಗೆ ಸ್ವಚ್ಛತೆಗೆ ಆದ್ಯತೆ ನೀಡುವಂತೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕು ಎಂದು ಧಾರವಾಡದ ಬಾಲವಿಕಾಸ ಅಕಾಡೆಮಿ ಅಧ್ಯಕ್ಷರಾದ ಸಂಗಮೇಶ ಬಬಲೇಶ್ವರ ಹೇಳಿದರು. ಜಿಲ್ಲಾಡಳಿತ, ಪ್ರವಾಸೋದ್ಯಮ ಇಲಾಖೆ, ಭಾರತೀಯ ಪುರಾತತ್ವ ಸರ್ವೇಕ್ಷಣ ಇಲಾಖೆ, ಸಿಕ್ಯಾಬ್ ಇನ್ಸಿಟ್ಯೂಷನ್ ಹಾಗೂ ಹೋಟೆಲ್ ಅಸೋಸಿಯೇಶನ್ ಇವರ ಸಹಯೋಗದಲ್ಲಿ ಶುಕ್ರವಾರ ಗೋಳಗುಮ್ಮಟ ಆವರಣದಲ್ಲಿ ಪ್ರವಾಸೋದ್ಯಮ ಮತ್ತು ಶಾಂತಿ ಘೋಷವಾಕ್ಯದಡಿಯಲ್ಲಿ ನಡೆದ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಇತಿಹಾಸದ ಘಟನೆ ಹಾಗೂ ಸ್ಮಾರಕಗಳ ಬಗ್ಗೆ ಅಧ್ಯಯನ ಮಾಡಿ ಅವುಗಳ ಮಹ್ವತವನ್ನು ಅರಿಯಬೇಕು. ನಮ್ಮ ರಾಜ್ಯದಲ್ಲಿ ಹಲವಾರು ಸ್ಮಾರಕ, ಪ್ರವಾಸಿ ಸ್ಥಳಗಳ ಮಹತ್ವ ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು ಎಂದು ಹೇಳಿದರು. ಮುಸ್ತಾಕ್ ಮಹ್ಮದ್ ಇನಾಮದಾರ, ಉಪನ್ಯಾಸ ನೀಡಿದರು. ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರಾದ ಮಲ್ಲಿಕಾರ್ಜುನ ಭಜಂತ್ರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ವಿಜಯಪುರದ ಐತಿಹಾಸಿಕ ಪ್ರವಾಸಿ ತಾಣಗಳ ಭಾವಚಿತ್ರಗಳ ಪ್ರದರ್ಶನ ಹಾಗೂ ಪ್ರವಾಸಿ ತಾಣಗಳ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಬೆಳಕು ಚೆಲ್ಲುತ್ತಿರುವ ಕಂಟೆಂಟ್ ಕ್ರೀಯರ್ಸ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಮಹೇಜಬಿನ್ ಹೊರ್ತಿ, ಉಪ ಮೇಯರ್ ದಿನೇಶ ಹಳ್ಳಿ, ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ, ಹೋಟೇಲ್ ಅಸೋಸಿಯೇಶನ್ ಅಧ್ಯಕ್ಷ ವಿಜಯಕುಮಾರ ದೋಣಿ, ಮಹೇಶ್ ಕ್ಯಾತನೂರ, ಆರತಿ ಪಾಟೀಲ, ಡಿ.ಪಿ. ಜಾಧವ ಸೇರಿದಂತೆ ಎಎಸ್ಐ ಸಿಬ್ಬಂದಿ, ಟೂರಿಸ್ಟ್ ಗೈಡ್, ಬಂಗಾರಮ್ಮ ಸಜ್ಜನ ಕಾಲೇಜು, ಸಿಕ್ಯಾಬ್ ಇನ್‌ಸ್ಟಿಟಿಶನ್ ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

**ವಿಜೇತರಿಗೆ ಬಹುಮಾನ**

**ಈ ವರ್ಷದ ಉತ್ತಮ ಪ್ರವಾಸಿ ಮಾರ್ಗದರ್ಶಕ ಎಂದು ಜಹಾಂಗೀರ್ ಅವರನ್ನು, ಪ್ರವಾಸಿ ಮಿತ್ರ ಎಂದು ಡಿ.ಜೆ ಪತ್ತಾರ ಅವರನ್ನು ಹಾಗೂ ಚಿತ್ರಕಲಾ ಸ್ಪರ್ಧೆ ಭಾಷಣ ಸ್ಪರ್ಧೆ, ರಸಪ್ರಶ್ನೆ, ಸ್ತಬ್ಧಚಿತ್ರ, ಕಿರುಚಿತ್ರ, ಸಾಕ್ಷ್ಯಚಿತ್ರ ಫೋಟೋಗ್ರಾಫಿ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದವರಿಗೆ ಪ್ರಮಾಣಪತ್ರ ಹಾಗೂ ಬಹುಮಾನ ವಿತರಿಸಲಾಯಿತು.**

# ಜೀವಜಲ ಸಂರಕ್ಷಿಸುವುದು ನಮ್ಮೆಲ್ಲರ ಕರ್ತವ್ಯ :ಹಣಮಂತ.ಪಿ

■ ಉದಯರಶ್ಮಿ ದಿನಪತ್ರಿಕೆ

ಚಡಚಣ: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಯುನಿಸೆಫ್ ಸಂಸ್ಥೆಯ ಮತ್ತು ಶ್ರೀ ಸಂಗಮೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ ಸಹಯೋಗದೊಂದಿಗೆ ಜೀವಜಲ ಸಂರಕ್ಷಿಸುವುದು ಹೇಗೆ ಎಂಬ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಪ್ರಾಚಾರ್ಯ ಡಾ ಎಸ್.ಬಿ.ರಾಠೋಡ ಮಾತನಾಡಿ, ಭೂಮಿ ಮೇಲಿನ ಅಮೂಲ್ಯ ಸಂಪತ್ತಾದ ನೀರನ್ನು ಮಿತವಾಗಿ ಬಳಸುವ ಮೂಲಕ ಮುಂದಿನ ಪೀಳಿಗೆಗೆ ಉಳಿಸಬೇಕಿದೆ ಎಂದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವಿಜಯಪುರ ಜಿಲ್ಲೆಯ ನೀರು ಉಳಿಸಿ ಕಾರ್ಯಕ್ರಮದ ಜಿಲ್ಲಾ ಸಂಂ-ಯೋಜಕ ಹಣಮಂತ ಪಿ ಮಾತನಾಡಿ, ಈ ಕಾರ್ಯಕ್ರದಡಿಯಲ್ಲಿ ಸೇವ್ ವಾಟರ್ (ಚಿತಜ ತಿಚಿಣಜಡಿ) ಅಪ್ಲಿಕೇಶನ್ ಅಭಿವೃದ್ಧಿ ಪಡಿಸಿದ್ದು, ಈ ನಿಟ್ಟಿನಲ್ಲಿ ಯುವ ಜನತೆಯಲ್ಲಿ ನೀರಿನ ಮಿತ ಬಳಕೆ ಮತ್ತು ಉಳಿತಾಯ ಮಾಡುವ ಮನೋಭಾವನೆಯನ್ನು ಮೂಡಿಸುವ ಪ್ರಯತ್ನದಲ್ಲಿ ನೀರು ಉಳಿಸುವ ಯುವಕರನ್ನು ಸ್ವಯಂ ಸೇವಕರು ಎಂದು ಕರೆಯಲಾಗುವುದು. ಮುಂದಿನ ಪೀಳಿಗೆಗೆ ನೀರನ್ನು ಉಳಿಸುವುದು ಮತ್ತು ಅಂತರ್ಜಲದ ಮಟ್ಟವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಿದೆ ಎಂದರು.ಐ.ಕ್ಯೂ.ಎ.ಸಿ. ಸಂಂ-ಯೋಜಕ ಡಾ. ಎಸ್.ಎಸ್.ದೇಸಾಯಿ ,ಇಕೋ ಕ್ಲಬಿನ ಸಂಯೋಜಕ ಪ್ರೊ. ರಶ್ಮೀ ಗಜಾಕೋಶ, ವಾಣಿಜ್ಯ ವಿಭಾಗದ ಪ್ರಾಧ್ಯಾಪಕ ಪ್ರೊ.ಬಸವರಾಜ ನೀಲವಾಣಿ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿಯ ಸೇವಾ ಪ್ರತಿನಿಧಿ ವಿಜಯಲಕ್ಷ್ಮೀ ಮತ್ತು ವಿದ್ಯಾರ್ಥಿಗಳು ಇದ್ದರು.



# ಹಡಪದ ಮಹಿಳೆ ಮೇಲಿನ ಮಾರಣಾಂತಿಕ ಹಲ್ಲೆ ಖಂಡಿಸಿ ಮನವಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಹುಬ್ಬಳ್ಳಿಯ ನೀಲಮ್ಮ ಹಂಪಣ್ಣ ಹಡಪದ ಇವರ ಮೇಲೆ ಮಾರಣಾಂತಿಕ ಹಲ್ಲೆ ಮಾಡಿರುವದನ್ನು ಖಂಡಿಸಿ ವಿಜಯಪುರ ಜಿಲ್ಲಾ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘ (ರಿ) ವತಿಯಿಂದ ಶುಕ್ರವಾರ ಜಿಲ್ಲಾಧಿಕಾರಿಗಳ ಮುಖಾಂತರ ಘನತೆವೆತ್ತ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು. ಈ ವೇಳೆ ಮಾತನಾಡಿದ ಹಡಪದ ಸಮಾಜದ ಮುಖಂಡರು, ಇತ್ತೀಚೆಗೆ ಹುಬ್ಬಳ್ಳಿಯಲ್ಲಿ ನಮ್ಮ ಹಿಂದುಳಿದ ಹಡಪದ ಸಮಾಜಕ್ಕೆ ಸೇರಿದ ಶ್ರೀಮತಿ ನೀಲಮ್ಮ ಹಡಪದ ಇವರ ಮೇಲೆ ದುಷ್ಕರ್ಮಿಯೊಬ್ಬ ಮಾರಣಾಂತಿಕ




ಹಲ್ಲೆಯನ್ನು ನಡೆಸಿ ಹತ್ಯೆಗೆ ಪ್ರಯತ್ನ ಪಟ್ಟಿದ್ದು, ದುಷ್ಕರ್ಮಿಯ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಿ ಹಿಂದುಳಿದ ಸಮಾಜಕ್ಕೆ ಸಾಮಾಜಿಕ ನ್ಯಾಯ ದೊರಕಿಸಿ ಕೊಡಬೇಕು. ಕ್ಷೌರಿಕ ವೃತ್ತಿಯ ಆಧಾರದ ಮೇಲಿರುವ ಈ ಸಮುದಾಯಕ್ಕೆ ಸಾಮಾಜಿಕ ಜೀವನದಲ್ಲಿ ಅಗೌರವ ಮೇಲಿಂದ ಮೇಲೆ ನಡೆಯುತ್ತಿರುವ ಪ್ರಕರಣಗಳು ಕಂಡು ಬರುತ್ತಿವೆ. ಕಾರಣ ಹಲ್ಲೆಗೊಳಗಾದ ಮಹಿಳೆಯ ಕುಟುಂಬಕ್ಕೆ ಭದ್ರತೆ ನೀಡಿ ಹಲ್ಲೆ ನಡೆಸಿದ ದುಷ್ಕರ್ಮಿಯ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕು. ಮತ್ತು ಸಾಮಾಜಿಕ ನ್ಯಾಯದ ಅಡಿಯಲ್ಲಿ ಮಹಿಳೆಗೆ ಜೀವನೋಪಾಯಕ್ಕೆ ಆರ್ಥಿಕ ವ್ಯವಸ್ಥೆಯನ್ನು ಕಲ್ಪಿಸಬೇಕೆಂದು ಆಗ್ರಹಪಡಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಗೌರವಾಧ್ಯಕ್ಷ ಎಂ.ಬಿ. ಅರ್ಜುಣಗಿ, ಜಿಲ್ಲಾಧ್ಯಕ್ಷ ವಿರೂಪಾಕ್ಷಿ ಜಿ. ಕತ್ನಳ್ಳಿ, ಜಿಲ್ಲಾ ಉಪಾಧ್ಯಕ್ಷ ಶಾಂತಾನಂದ ದೇವೂರ, ಬಾಬು ಹಡಪದ, ಜಿಲ್ಲಾ ಕಾರ್ಯಾಧ್ಯಕ್ಷ ಶಿವಾನಂದ ಆರ್. ನಾವಿ, ಜಿಲ್ಲಾ ಕೋಶಾಧ್ಯಕ್ಷ ನಿಂಗಪ್ಪ ಎ. ನಾವಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರಕಾಶ ಎಸ್ ಉತ್ನಾಳ, ಜಿಲ್ಲಾ ಸಂಚಾಲಕ ಮಲ್ಲೇಶಿ ನಾವಿ, ನಗರ ಸಂಚಾಲಕ ಬಸವರಾಜ ಬೆಕಿನಾಳ, ಸಿಂದಗಿ ಪುರಸಭೆಯ ಮಾಜಿ ಸದಸ್ಯ ಚಂದ್ರಶೇಖರ ಅಮಲಿಹಾಳ, ಬಸವರಾಜ ಬ್ಯಾಲ್ಯಾಳ, ಈರಣ್ಣ ಹಡಪದ, ಚಿದಾನಂದ ತೊರವಿ, ಧರೆಪ್ಪ ನಾವಿ, ಓಂಕಾರ ನಾವಿ, ರಾಜು ಯಂಕಂಚಿ, ಶರಣು ಹಡಪದ, ಶರಣಬಸು ಮಾಶ್ಯಾಳ. ರವಿ ಹಂಜಗಿ ಮತ್ತು ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಅ.1ರಂದು ವಿಶ್ವ ಹಿರಿಯ ನಾಗರಿಕರ ದಿನಾಚರಣೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ವಿವಿಧ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ಅಕ್ಟೋಬರ್ 1ರಂದು ಬೆಳಗ್ಗೆ 11ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ವಿಶ್ವ ಹಿರಿಯ ನಾಗರೀಕರ ದಿನಾಚರಣೆ ಆಯೋಜಿಸಲಾಗಿದೆ.ವಿಶ್ವ ಹಿರಿಯ ನಾಗರಿಕರ ದಿನಾಚರಣೆ ನಿಮಿತ್ಯ ಹಮ್ಮಿಕೊಳ್ಳಲಾದ ಜಿಲ್ಲಾ ಮಟ್ಟದ ಕ್ರೀಡಾ ಸ್ಪರ್ಧೆ ಮತ್ತು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ವಿಜೇತರಿಗೆ ಪ್ರಮಾಣ ಪತ್ರ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08352-796060ಗೆ ಸಂಪರ್ಕಿಸಬೇಕು ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಪ್ರಕಟಣೆ ತಿಳಿಸಿದೆ.


# ಅಂಗನವಾಡಿ ಶಿಕ್ಷಣ ಮಕ್ಕಳಿಗೆ ಅಡಿಪಾಯ :ಕೆ.ಕೆ.ಚವ್ಹಾಣ


■ ಉದಯರಶ್ಮಿ ದಿನಪತ್ರಿಕೆ


ದೇವರಹಿಪ್ಪರಗಿ: ಇಂದಿನ ಮಕ್ಕಳು ಭವಿಷ್ಯದ ಪ್ರಜೆಗಳು ಆದ್ದರಿಂದ ಅಂಗನವಾಡಿ ಶಿಕ್ಷಣ ಮಕ್ಕಳಿಗೆ ಅಗತ್ಯ ಹಾಗೂ ಅಡಿಪಾಯವಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಉಪನಿರ್ದೇಶಕ ಕೆ.ಕೆ.ಚವ್ಹಾಣ ಹೇಳಿದರು. ತಾಲ್ಲೂಕಿನ ಕೋರವಾರ ಗ್ರಾಮದಲ್ಲಿ ಗುರುವಾರ ಜರುಗಿದ ರಾಷ್ಟ್ರೀಯ ಪೋಷಣಾ ಅಭಿಯಾನದಲ್ಲಿ ಪಾಲ್ಗೊಂಡು ಪೋಷಣಾ ಮಾಸಾಚರಣೆ ಮಹತ್ವವನ್ನು ಉದ್ದೇಶಿಸಿ





ಮಾತನಾಡಿದರು. ಮಕ್ಕಳಲ್ಲಿ ತಾರತಮ್ಯ ತೋರದೆ ಹೆಣ್ಣುಮಕ್ಕಳ ರಕ್ಷಣೆ, ಶಿಕ್ಷಣಕ್ಕೆ ಒತ್ತು ನೀಡಲು ಜೊತೆಗೆ ತಾಯಿ ಮತ್ತು ಮಗುವಿನ ಆರೋಗ್ಯದ ಕುರಿತು ಕಾಳಜಿ ವಹಿಸಲು ಅವರು ಕರೆ ನೀಡಿದರು. ಸಿಂದಗಿ ತಾಲ್ಲೂಕು ಸಿಡಿಪಿಓ ಎಸ್.ಎನ್.ಹಿರೇಮಠ ಮಾತನಾಡಿ, ಮಹಿಳೆ ಮತ್ತು ಮಕ್ಕಳಲ್ಲಿ ಅಪೌಷ್ಟಿಕತೆ ಉಂಟಾಗದಿರಲು ಸಲಹೆ ನೀಡಿದರು. ಪೋಷಣಾ ಮಾಹ ಅಂಗವಾಗಿ ಗರ್ಭಿಣಿಯರಿಗೆ ಸೀಮಂತ ಕಾರ್ಯ ಕೈಗೊಂಡು ಸಸಿ ವಿತರಿಸಿ ಮಕ್ಕಳಂತೆ ಪೋಷಿಸಲು ಹೇಳಲಾಯಿತು. ಮಕ್ಕಳಿಗೆ ಅನ್ನಪ್ರಾಶನ, ಹೆಣ್ಣುಮಕ್ಕಳ ಜನ್ಮದಿನಾಚರಣೆ, ಹಾಗೂ ಹಳ್ಳಿಜೀವನ ಸೊಗಡನ್ನು ಪ್ರದರ್ಶಿಸಲಾಯಿತು.ಪೋಷಣಾ ಅಭಿಯಾನ ತಾಲ್ಲೂಕು ಸಂಯೋಜಕ ಪ್ರಮೋದ ಬೆಳಗಾವಿ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸೈನಾಬಿ ಬ್ಯಾಕೋಡ, ಸದಸ್ಯರಾದ ರಾಜಶೇಖರ ಛಾಯಾಗೋಳ, ಮಲ್ಲಪ್ಪ ಪಟ್ಟಣ, ಲಕ್ಷ್ಮೀ ಪಾಟೀಲ, ಉಜ್ವಲ ಸಂಸ್ಥೆ ಸಂಯೋಜಕ ಸಾಗರ ಘಾಟಗೆ, ರೈತಸಂಘದ ತಾಲ್ಲೂಕು ಅಧ್ಯಕ್ಷ ತಾಯಂದಿರು ಇದ್ದರು.


**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR